ಸಂಪುಟ 01 | ಸಂಚಿಕೆ 232 ಮಂಗಳವಾರ 27 ಅಕ್ಟೋಬರ್ 2026 | ಪುಟ 4 | ಬೆಲೆ-2 ರೂ.

Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) ವಿಶ್ವ ಔದ್ಯೋಗಿಕ ಚಿಕಿತ್ಸಾ ದಿನ (World Occupational Therapy Day) ದೈಹಿಕ ಅಥವಾ ಮಾನಸಿಕ ಸವಾಲುಗಳನ್ನು ಎದುರಿಸುವ ಜನರು ದೈನಂದಿನ ಚಟುವಟಿಕೆಗಳನ್ನು ಸ್ವತಂತ್ರವಾಗಿ ನಿರ್ವಹಿಸಲು ಔದ್ಯೋಗಿಕ ಚಿಕಿತ್ಸೆಯು ಹೇಗೆ ಸಹಾಯ ಮಾಡುತ್ತದೆ ಎಂಬುದರ ಬಗ್ಗೆ ಜಾಗೃತಿ ಮೂಡಿಸುವುದು.

2)ಜತೀಂದ್ರನಾಥ್ ದಾಸ್ ಜನ್ಮದಿನ ಸ್ಮರಣೆ (Birth Anniversary of Jatindranath Das) ಭಾರತೀಯ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದ ಕ್ರಾಂತಿಕಾರಿ ಜತೀಂದ್ರನಾಥ್ ದಾಸ್ ಅವರ ಜನ್ಮದಿನವನ್ನು ಈ ದಿನ ಕೆಲವು ದಿನಾಚರಣೆಗಳ ಪಟ್ಟಿಗಳಲ್ಲಿ ಸ್ಮರಿಸಲಾಗುತ್ತದೆ.

ಸುಭಾಷಿತ

ಜೀವನವು ಹೋರಾಟದ ಕಣ.
ಹೋರಾಟದ ಮೂಲಕವೇ ನಾವು
ಮುಂದಕ್ಕೆ ಸಾಗಬೇಕಾಗಿದೆ.

-ಸ್ವಾಮಿ ವಿವೇಕಾನಂದ

ಕಬ್ಬು ಬೆಳೆಗಾರರ ಸಮಸ್ಯೆ :

ಕೇಂದ್ರದ ಮೇಲೆ ಹೊಣೆಗಾರಿಕೆ ಹೆಚ್ಚು : ಸಿಎಂ ಡಿಕೆಶಿ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಕಬ್ಬು ಬೆಳೆಗಾರರ ಬೇಡಿಕೆಗಳ ವಿಚಾರವಾಗಿ ರಾಜ್ಯಕ್ಕಿಂತಲೂ, ಕೇಂದ್ರ ಸರ್ಕಾರದ ಮೇಲಿನ ಹೊಣೆಗಾರಿಕೆ ಹೆಚ್ಚಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸುವ ವೇಳೆ ಕಿತ್ತೂರಿನಲ್ಲಿ ಅವರ ಜೊತೆ ಚರ್ಚೆ ಮಾಡಿ ಅಭಿಪ್ರಾಯ ಆಲಿಸಿದ್ದೇನೆ. ಇಂದು ಬೆಳಗಾವಿಯಲ್ಲಿ ಮೊದಲು ಸಕ್ಕರೆ ಕಾರ್ಖಾನೆ ಮಾಲೀಕರ ಜೊತೆ ಚರ್ಚೆ ನಡೆಸಲಾಗುವುದು. ನಂತರ ರೈತರ, ಬಳಿಕ ಜನ ಪ್ರತಿನಿಧಿಗಳ ಜೊತೆಯಲ್ಲಿ ಚರ್ಚೆ ನಡೆಸಲಾಗುವುದು ಎಂದು ಹೇಳಿದರು.

ಇಂದು ಬೆಳಗ್ಗೆ ಹಲವಾರು ಶಾಸಕರು



ತಮ ಬಳಿಗೆ ಬಂದು ಅವರ ಮೇಲಿರುವ ಒತ್ತಡಗಳನ್ನು ಹೇಳಿಕೊಂಡಿದ್ದಾರೆ. ಅವರಿಗೆ ಸಭೆಯಲ್ಲೇ ಮಾತನಾಡುವಂತೆ ನಾನು ಮಾರ್ಗದರ್ಶನ ನೀಡಿದ್ದೇನೆ ಎಂದರು.ಶಾಸಕರು, ರೈತರ ಮತದಾರರ ಪ್ರತಿನಿಧಿಗಳು ಸರ್ಕಾರದ ಧ್ವನಿ. ಮೈಸೂರು, ಮಧ್ಯ ಕರ್ನಾಟಕ, ಬೆಳಗಾವಿ, ರಾಯಚೂರು, ಹುಬ್ಬಳ್ಳಿ, ಧಾರವಾಡ ಸೇರಿದಂತೆ ವಿವಿಧ ಕಡೆಗಳಲ್ಲಿ ಬೆಳೆಗಾರರ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಲಾಗುವುದು.

ರೈತರ ರಕ್ಷಣೆ ನಮ ಕರ್ತವ್ಯ. ಅದೇ ಸಮಯದಲ್ಲಿ ಸಕ್ಕರೆ ಕಾರ್ಖಾನೆಗಳ ಮಾಲೀಕರ ಬೇಡಿಕೆಗಳನ್ನು ಆಲಿಸಬೇಕಿದೆ. ಎಲ್ಲಾ ರೀತಿಯ ಚರ್ಚೆಗಳಾದ ನಂತರ ಮುಂದಿನ ಕ್ರಮಗಳ ಬಗ್ಗೆ ಪರಿಶೀಲಿಸಲಾಗುವುದು. ಇಂತಹ ಸಂದರ್ಭದಲ್ಲಿ ಕೇಂದ್ರ ಸರ್ಕಾರವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಅನಿವಾರ್ಯವಾಗಿದೆ. ರಾಜ್ಯದ ಪಾಲು ಶೇ.10ರಷ್ಟು ಇದ್ದರೆ, ಕೇಂದ್ರದ ಪಾಲು ಶೇ. 90 ರಷ್ಟು ಎಂದು ಹೇಳಿದರು.

ಈ ಹಿಂದೆ ಸಕ್ಕರೆ ಕಾರ್ಖಾನೆಯವರು ಒಪ್ಪದೇ ಇದ್ದರೂ, ಪ್ರತಿ ಟನ್‌ಗೆ 250 ರೂ.ಗಳನ್ನು ಹೆಚ್ಚುವರಿಯಾಗಿ ನೀಡುವಂತೆ ಸರ್ಕಾರ ಆದೇಶಿಸಿತ್ತು. ರಾಜ್ಯ ಸರ್ಕಾರವೂ ಕೂಡ 50 ರೂ.ಗಳು ನೀಡಿತ್ತು. ಬಹಳಷ್ಟು ಕಾರ್ಖಾನೆಗಳು ಸರ್ಕಾರದ ಸೂಚನೆಯಂತೆ 250 ರೂ.ಗಳನ್ನು ನೀಡಿಲ್ಲ. ಅದು ಕೂಡ ತಮ ಗಮನಕ್ಕಿದೆ. ಇಂದಿನ ಸಭೆಯಲ್ಲಿ ಎಲ್ಲವನ್ನೂ ಚರ್ಚೆ ಮಾಡುತ್ತೇವೆ ಎಂದು ಹೇಳಿದರು.

ಕೇಂದ್ರ ಸರ್ಕಾರ, ರಾಜ್ಯದಲ್ಲಿ ಉತ್ಪಾದನೆಯಾಗುವ ಎಥೆನಾಲ್ ಅನ್ನು ಸಂಪೂರ್ಣವಾಗಿ ಖರೀದಿಸಬೇಕು ಎಂಬ ಬೇಡಿಕೆಯ ಬಗ್ಗೆಯೂ ಚರ್ಚೆ ನಡೆಸಲಾಗುವುದು ಎಂದು ಹೇಳಿದರು. ಇದೇ ವೇಳೆ ಸ್ಟಿಂಗ್ ಆಪರೇಷನ್ ಬಗ್ಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಗಳಿಗೆ ಯಾವುದೇ ಪ್ರತಿಕ್ರಿಯೆ ನೀಡದೇ ಡಿ.ಕೆ.ಶಿವಕುಮಾರ್ ನಿರ್ಗಮಿಸಿದರು.

ಶ್ರೀ ಎಸ್.ಎಸ್. ವಿದ್ಯಾಸಂಸ್ಥೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಪಟ್ಟಣದ ಪ್ರತಿಷ್ಠಿತ ಶ್ರೀ ಎಸ್.ಎಸ್. ವಿದ್ಯಾಸಂಸ್ಥೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸೋಮವಾರ ಭಕ್ತಿಭಾವದಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಸಂಸ್ಥೆಯ ಸಂಸ್ಥಾಪಕರಾದ ಎಚ್. ಎಸ್. ಪಾಟೀಲ ಅವರು ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ನಮನಗಳನ್ನು ಅರ್ಪಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಹರ್ಷಿ ವಾಲ್ಮೀಕಿಂಯವರುಅ ರಾಮಾಯಣ ಮಹಾಕಾವ್ಯವನ್ನು ರಚಿಸುವ ಮೂಲಕ ಮಾನವಕುಲಕ್ಕೆ ಅಮೂಲ್ಯವಾದ ಕೊಡುಗೆ ನೀಡಿದ್ದಾರೆ. ಅವರ ಸಾಹಿತ್ಯ, ಚಿಂತನೆ ಹಾಗೂ ಜೀವನಾದರ್ಶಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಕವಾಗಿವೆ. ಅವರ ಆದರ್ಶಗಳನ್ನು ಅರಿತುಕೊಂಡು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಸಚಿನ್ ಎಚ್. ಪಾಟೀಲ, ಬಿ.ಪಿ.ಎಡ್. ಕಾಲೇಜಿನ ಪ್ರಾಚಾರ್ಯ ಶಿವಕುಮಾರ ನಾಯಕ, ಮಹಿಳಾ ಕಾಲೇಜಿನ ಪ್ರಾಚಾರ್ಯ ಡಾ. ಎಚ್.ಬಿ. ನಡುವಿನಕೇರಿ, ಪದವಿಪೂರ್ವ ಕಾಲೇಜಿನ ಎಸ್.ಬಿ. ಮಂಗ್ಯಾಳ, ಪ್ರೌಢಶಾಲೆಯ ಮುಖ್ಯಸ್ಥ ಅಶೋಕ ಕಟ್ಟಿ, ಬಿ.ಆರ್. ಹಿರೇಹೊಳಿ, ಎಸ್.ಸಿ. ಗುಡಗುಂಟಿ, ಎಚ್.ಬಿ. ಪಾಟೀಲ, ಎಂ.ಎಸ್. ರಾಯಗೊಂಡ, ಶರಣು ಬಿರಾದಾರ ಸೇರಿದಂತೆ ಸಂಸ್ಥೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ಶಾಸಕ ನಾರಾ ಭರತ್‌ರೆಡ್ಡಿ ಜನ್ಮದಿನ: ಅಕ್ಕಮಹಾದೇವಿ ಕಂಚಿನ ಮೂರ್ತಿಗೆ 51 ಸಾವಿರ ದೇಣಿಗೆ

ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಬಡವರ, ದೀನ ದಲಿತರ ಹಾಗೂ ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಗಾಗಿ ಬಳ್ಳಾರಿ ನಗರ ಶಾಸಕ ನಾರಾ ಭರತ್‌ರೆಡ್ಡಿ ಅವರು ಸಾಕಷ್ಟು ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದ್ದಾರೆ ಎಂದು ವೀರಶೈವ ಲಿಂಗಾಯತ ಮಹಾ ವೇದಿಕೆಯ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ್ ಶ್ಲಾಘಿಸಿದರು.

ಪಟ್ಟಣದ ಸಾಂಗಾತ್ರಯ ಸಂಸ್ಕೃತ ಪಾಠಶಾಲೆಯಲ್ಲಿ ಶಾಸಕ ನಾರಾ ಭರತ್‌ರೆಡ್ಡಿ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಹಾಶಿವಶರಣೆ ಅಕ್ಕಮಹಾದೇವಿಯ ಕಂಚಿನ ಮೂರ್ತಿ ಸ್ಥಾಪನೆಗಾಗಿ ಹೊಸಕೋಟೆ ಜಗದೀಶ್ ನೇತೃತ್ವದಲ್ಲಿ ನಾರಾ ಭರತ್‌ರೆಡ್ಡಿ ಅಭಿಮಾನಿ ಬಳಗದಿಂದ 51,000 ಸಹಾಯಧನದ ದೇಣಿಗೆಯನ್ನು ಇದೇ



ಸಂದರ್ಭದಲ್ಲಿ ಹಸ್ತಾಂತರಿಸಲಾಯಿತು.

ಬಳಿಕ ಮಾತನಾಡಿದ ಜಗದೀಶ್ ಅವರು, "ಕೊಡಗೈದಾನಿ, ಅಭಿವೃದ್ಧಿಯ ಹರಿಕಾರ ನಾರಾ ಸೂರ್ಯನಾರಾಯಣರೆಡ್ಡಿ ಅವರು ಕಂಪ್ಲಿ ಕ್ಷೇತ್ರಕ್ಕೆ ಶಾಸಕ ಗಣೇಶ್ ಅವರನ್ನು ತರುವ ಮೂಲಕ ಈ ಭಾಗದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳಿಗೆ ಮುನ್ನುಡಿ ಬರೆದಿದ್ದಾರೆ. ಅವರ ಹಾದಿಯಲ್ಲೇ ಸಾಗಿರುವ ನಾರಾ ಭರತ್‌ರೆಡ್ಡಿ ಅವರು ಬಳ್ಳಾರಿ ನಗರ ಸೇರಿದಂತೆ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜನಪರ ಸೇವೆ ಮಾಡುತ್ತಾ ಇಂದಿನ ಯುವ ಪೀಳಿಗೆಗೆ ಮಾರ್ಗದರ್ಶಕರಾಗಿದ್ದಾರೆ. ಅವರು ರಾಜಕೀಯ ಸೇರಿದಂತೆ ಪ್ರತಿಯೊಂದು ರಂಗದಲ್ಲೂ ದೊಡ್ಡ ಮಟ್ಟದಲ್ಲಿ ಬೆಳೆಯಲಿ. ಆ ದೇವರು ಅವರಿಗೆ ಆಯುಷ್ಯ, ಆರೋಗ್ಯ, ಸಮೃದ್ಧಿ ನೀಡಿ ಸಮಾಜ ಸೇವೆಗೆ ಇನ್ನಷ್ಟು ಶಕ್ತಿ ತುಂಬಲಿ" ಎಂದು ಹಾರೈಸಿದರು. ಇದಕ್ಕೂ ಮುನ್ನ ಗಣ್ಯರು ಇಲ್ಲಿನ ಅಕ್ಕಮಹಾದೇವಿ ದೇವಸ್ಥಾನಕ್ಕೆ ಭೇಟಿ ನೀಡಿ ದೇವಿಯ ದರ್ಶನ ಪಡೆದರು.

ಕಾರ್ಯಕ್ರಮದಲ್ಲಿ ಅಕ್ಕಮಹಾದೇವಿ ಮಹಿಳಾ ಮಂಡಳಿ ಅಧ್ಯಕ್ಷೆ ಡಾ. ಶಾರದಾ ಜಗನ್ನಾಥ ಹಿರೇಮಠ, ವೀರಶೈವ ಲಿಂಗಾಯತ ಮಹಾ ವೇದಿಕೆಯ ಕಂಪ್ಲಿ ತಾಲೂಕು ಅಧ್ಯಕ್ಷ ಬಳೇ ಮಲ್ಲಿಕಾರ್ಜುನ, ಮುಖಂಡರಾದ ಅರವಿ ಬಸವನಗೌಡ, ಡಾ. ಜಗನ್ನಾಥ ಹಿರೇಮಠ, ಕರೇಕಲ್ ಮನೋಹರ ಹಾಗೂ ಮಹಿಳಾ ಮಂಡಳಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ವಾಲ್ಮೀಕಿ ಮಹರ್ಷಿಗಳ ಜೀವನಾದರ್ಶಗಳು ಸಮಾಜಕ್ಕೆ ಸದಾ ಪ್ರೇರಣೆ: ಸಿದ್ದನಗೌಡ ಮಂಗಳೂರು

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಮಹರ್ಷಿ ವಾಲ್ಮೀಕಿ ಅವರು ತಮ್ಮ ಅಪಾರ ಜ್ಞಾನ, ತಪಸ್ಸು ಹಾಗೂ ಸಾಹಿತ್ಯಿಕ ಕೊಡುಗೆಯ ಮೂಲಕ ರಾಮಾಯಣ ಮಹಾಕಾವ್ಯವನ್ನು ರಚಿಸಿ, ಇಡೀ ಮಾನವಕುಲಕ್ಕೆ ಆದರ್ಶ ಜೀವನದ ಮೌಲ್ಯಗಳನ್ನು ಪರಿಚಯಿಸಿದ್ದಾರೆ.

ಅವರ ಜೀವನ ಪರಿವರ್ತನೆ, ಚಿಂತನೆ ಹಾಗೂ ಆದರ್ಶಗಳು ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕವಾಗಿವೆ ಎಂದು ಸರ್ವಜ್ಞ ವಿದ್ಯಾಪೀಠದ ಸಂಸ್ಥಾಪಕ ಅಧ್ಯಕ್ಷ ಸಿದ್ದನಗೌಡ ಮಂಗಳೂರು ಹೇಳಿದರು. ಪಟ್ಟಣದ ಸರ್ವಜ್ಞ ವಿದ್ಯಾಪೀಠದ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಸೋಮವಾರ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ವಾಲ್ಮೀಕಿ ಮಹರ್ಷಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಅವರನ್ನು ಸಂಸ್ಕೃತ ಸಾಹಿತ್ಯದ ಆದಿಕವಿ ಎಂದು ಗೌರವಿಸಲಾಗುತ್ತದೆ. ರತ್ನಾಕರ ಎಂಬ



ಹೆಸರಿನಿಂದ ಪರಿಚಿತರಾಗಿದ್ದ ಅವರು, ಆಧ್ಯಾತ್ಮಿಕ ಪರಿವರ್ತನೆಯ ಮೂಲಕ ಮಹಾನ್ ಋಷಿಯಾಗಿ ರೂಪುಗೊಂಡರು ಎಂಬುದು ಅವರ ಜೀವನದ ಪ್ರಮುಖ ಸಂದೇಶವಾಗಿದೆ. ನಾರದ ಮಹರ್ಷಿಗಳ ಭೇಟಿಯು ಅವರ ಬದುಕಿನಲ್ಲಿ ಮಹತ್ವದ ಬದಲಾವಣೆಗೆ ಕಾರಣವಾಯಿತು. ಆತ್ಮಾವಲೋಕನ, ಭಕ್ತಿ ಹಾಗೂ ನಿರಂತರ ತಪಸ್ಸಿನ ಮೂಲಕ ವ್ಯಕ್ತಿಯ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ಸಾಧ್ಯ ಎಂಬುದನ್ನು ವಾಲ್ಮೀಕಿಯವರ ಬದುಕು ಸಾರುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಗುರುಗಳಾದ ಸಂತೋಷ ಪವಾರ, ಶ್ರೀರಾಜು ಜವಳಗೇರಿ, ದೈಹಿಕ ಶಿಕ್ಷಕರಾದ ಬಸವರಾಜ ಚಳಗಿ, ಶಾಂತಗೌಡ ಬಿರಾದಾರ ಸೇರಿದಂತೆ ಶಾಲೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಮಹರ್ಷಿ ವಾಲ್ಮೀಕಿಯವರ ಜೀವನ ಮತ್ತು ಸಾಹಿತ್ಯಿಕ ಕೊಡುಗೆಯನ್ನು ಸ್ಮರಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಉತ್ತಮ ಮೌಲ್ಯಗಳು, ಜ್ಞಾನ ಮತ್ತು ಆದರ್ಶ ಜೀವನದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

ತ್ರಯಂಭಕೇಶ್ವರ ದೇವಸ್ಥಾನ ಜಾಗ ಕಬಳಿಕೆಗೆ ವಿರೋಧಿಸಿ – ನಾಳೆ ಕವಿತಾಳ ಬಂದ್‌ಗೆ ಕರೆ

ನಾಳೆ ಕವಿತಾಳ ಬಂದ್ (28 ಅಕ್ಟೋಬರ್)

ನೈಜ್ಯ ದೆಸೆ ನ್ಯೂಸ್

ಕವಿತಾಳ: ಪಟ್ಟಣದ ಶ್ರೀ ತ್ರಯಂಭಕೇಶ್ವರ ದೇವಸ್ಥಾಕ್ಕೆ ಸೇರಿದ ಜಾಗವನ್ನು ಕಬಳಿಸಿ ಕೊಳಗೇರಿ ಅಭಿವೃದ್ಧಿ ಮಂಡಳಿ ಅಕ್ರಮವಾಗಿ ಹಕ್ಕುಪತ್ರ ವಿತರಣೆ ಮಾಡುತ್ತಿರುವುದನ್ನು ವಿರೋಧಿಸಿ ಪ್ರತಿಭಟನೆ ಹಾಗೂ ಕವಿತಾಳ ಬಂದ್ ಮಾಡಲಾಗುವುದೆಂದು ತ್ರಯಂಭಕೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷ ಗಂಗ್ಗಪ ದಿನ್ನಿ ಹಾಗೂ ಪ್ರಧಾನ ಕಾರ್ಯದರ್ಶಿ ಅಲ್ಲಮಪ್ರಭು ಅವರು ಪತ್ರಿಕಾ ಹೇಳಿಕೆ ನೀಡಿದ್ದಾರೆ.

ಈ ಕುರಿತು ಹಲವಾರು ಸಾರಿ ಜನಪ್ರತಿನಿಧಿಗಳಿಗೆ, ತಹಸೀಲ್ದಾರರು ಸೇರಿದಂತೆ ಜಿಲ್ಲಾಧಿಕಾರಿಗಳಿಗೂ ಮನವಿ ಮಾಡಿದ್ದರು ಸಹ ಯಾವುದೇ ಪ್ರಯೋಜನವಾಗಿಲ್ಲ ಹೀಗಾಗಿ ದೇವಸ್ಥಾನದ ಜಾಗ ಉಳಿಸಿಕೊಳ್ಳಲು ದೇವಸ್ಥಾನ ಸಮಿತಿ



ಹಾಗು ಪಟ್ಟಣದ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಭಕ್ತರು ಹಾಗೂ ಸಾರ್ವಜನಿಕರ ಬೆಂಬಲದೊಂದಿಗೆ ದಿನಾಂಕ ಅಕ್ಟೋಬರ್ 28 ಬುದುವಾರದಂದು ಪಟ್ಟಣ ಪಂಚಾಯತ್ ಕಾರ್ಯಾಲಯದ ಮುಂದೆ ಪ್ರತಿಭಟನೆ ನಡೆಸಲಾಗುವುದು ಮತ್ತು ಕವಿತಾಳ ಬಂದ್ ಹಮ್ಮಿಕೊಳ್ಳಲಾಗಿದೆ, ಬಂದ್ ಹಿನ್ನಲೆಯಲ್ಲಿ ಪಟ್ಟಣದ ಅಂಗಡಿ ಮುಂಗಟ್ಟುಗಳನ್ನು ಸಂಪೂರ್ಣ ಬಂದ್ ಮಾಡಲಾಗುವುದು , ವರ್ತಕರು ಹಾಗೂ ಸಾರ್ವಜನಿಕರು ಬಂದ್‌ಗೆ ಬೆಂಬಲಿಸಿ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

ಕಂಪ್ಲಿ ಆಸ್ಪತ್ರೆಗೆ ಡಿಎಚ್‌ಒ ದಿಢೀರ್ ಲಗ್ಗೆ: ಕರ್ತವ್ಯ ಲೋಪವೆಸಗಿದ ವೈದ್ಯರು, ಸಿಬ್ಬಂದಿಗೆ ಶೋಕಾಸ್ ನೋಟಿಸ್

ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಸ್ಥಳೀಯ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬಳ್ಳಾರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ (ಡಿಎಚ್‌ಒ) ಡಾ. ಅಲಕನಂದಾ ಡಿ. ಮಾಳಗಿ ಭಾನುವಾರ ದಿಢೀರ್ ಭೇಟಿ ನೀಡಿ ಕಡತ ಹಾಗೂ ಸಿಬ್ಬಂದಿ ಕರ್ತವ್ಯದ ಪರಿಶೀಲನೆ ನಡೆಸಿದರು. ಕರ್ತವ್ಯ ಲೋಪ ತೋರಿದ ವೈದ್ಯರು ಹಾಗೂ ಸಿಬ್ಬಂದಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿ, ಶೋಕಾಸ್ ನೋಟಿಸ್ ಜಾರಿಗೊಳಿಸಲು ಆದೇಶಿಸಿದ್ದಾರೆ.

ಘಟನೆಯ ಹಿನ್ನೆಲೆ: ಶನಿವಾರ ರಾತ್ರಿ ಸ್ಥಳೀಯ ಶಾಸಕರಾದ ಜೆ.ಎನ್. ಗಣೇಶ್ ಅವರು ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿದ್ದಾಗ ವೈದ್ಯರು ಮತ್ತು ಸಿಬ್ಬಂದಿ ಗೈರುಹಾಜರಾಗಿರುವುದು ಕಂಡುಬಂದಿತ್ತು. ಅಲ್ಲದೆ, ಹಾಜರಾತಿ ಪುಸ್ತಕದಲ್ಲಿ ಮುಂಚಿತವಾಗಿಯೇ ರಜೆ ಹಾಕಿರುವುದು ಮತ್ತು ರೋಗಿಗಳಿಗೆ ಸರಿಯಾದ ಸ್ಪಂದನೆ ಸಿಗುತ್ತಿಲ್ಲ ಎಂಬ ಸಾರ್ವಜನಿಕರ ದೂರುಗಳನ್ನು ಶಾಸಕರು ಡಿಎಚ್‌ಒ ಅವರ ಗಮನಕ್ಕೆ ತಂದಿದ್ದರು.

ಶಾಸಕರ ದೂರಿನ ಹಿನ್ನೆಲೆಯಲ್ಲಿ ಭಾನುವಾರ ಆಸ್ಪತ್ರೆಗೆ ಭೇಟಿ ನೀಡಿದ ಡಿಎಚ್‌ಒ, ಆಸ್ಪತ್ರೆಯ ಹಾಜರಾತಿ ಪುಸ್ತಕ ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿದರು. ಶಾಸಕರು ಬಂದಿದ್ದ ಸಮಯದಲ್ಲಿ



ಆಯುಷ್ ವೈದ್ಯರು ಊಟಕ್ಕೆ ತೆರಳಿರುವುದು ಸಿಸಿಟಿವಿಯಲ್ಲಿ ದೃಢಪಟ್ಟಿದೆ. ಈ ಕರ್ತವ್ಯ ಲೋಪಕ್ಕಾಗಿ ಆಯುಷ್ ವೈದ್ಯ ಡಾ. ಮಲ್ಲೇಶಪ್ಪ ಅವರಿಗೆ ನೋಟಿಸ್ ನೀಡಲು ಹಾಗೂ ಆಸ್ಪತ್ರೆಯ ಉಳಿದ ವೈದ್ಯರು ಮತ್ತು ಸಿಬ್ಬಂದಿಗೆ ಶೋಕಾಸ್ ನೋಟಿಸ್ ಜಾರಿ ಮಾಡಲು ಡಿಎಚ್‌ಒ ಸೂಚಿಸಿದರು.

"ಆಸ್ಪತ್ರೆಗೆ ಬಡ ರೋಗಿಗಳೇ ಹೆಚ್ಚಾಗಿ ಬರುತ್ತಾರೆ. 24/7 ಕರ್ತವ್ಯದಲ್ಲಿರುವ ವೈದ್ಯರು ಕಡ್ಡಾಯವಾಗಿ ಆಸ್ಪತ್ರೆಯಲ್ಲೇ ಇರಬೇಕು. ಸದ್ಯ ಹೆರಿಗೆ ಹಾಗೂ ಡಯಾಲಿಸಿಸ್ ವಿಭಾಗದಲ್ಲಿ ಉತ್ತಮ ಸೇವೆ ನಡೆಯುತ್ತಿದ್ದರೂ, ಕರ್ತವ್ಯದ ಅವಧಿಯಲ್ಲಿ ಸಿಬ್ಬಂದಿ ಹೊರಗಡೆ ಹೋಗುವಂತಿಲ್ಲ. ಮುಂದಿನ ದಿನಗಳಲ್ಲಿ ಇಂತಹ ಬೇಜವಾಬ್ದಾರಿತನ ಕಂಡುಬಂದಲ್ಲಿ ಯಾವುದೇ ಮುಲಾಜಿಲ್ಲದೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು," ಎಂದು ಡಿಎಚ್‌ಒ ಡಾ. ಅಲಕನಂದಾ ಎಚ್ಚರಿಸಿದರು.

ಇದೇ ವೇಳೆ, ಶಾಸಕರ ಅಧ್ಯಕ್ಷತೆಯಲ್ಲಿ ಆರು ತಿಂಗಳಿಗೊಮ್ಮೆ ನಡೆಯಬೇಕಾಗಿದ್ದ ಎಕ್ಸಿಕ್ಯೂಟಿವ್ ಹಾಗೂ ಜನರಲ್ ಮೀಟಿಂಗ್‌ಗಳು ಬಾಕಿ ಉಳಿದಿದ್ದು, ಮುಂದಿನ ದಿನಗಳಲ್ಲಿ ಅವುಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಟಿಎಚ್‌ಒ ಡಾ. ಅರುಣ್‌ಕುಮಾರ್, ವೈದ್ಯರಾದ ಡಾ. ರವೀಂದ್ರ ಕನಿಕೇರಿ, ಡಾ. ಪ್ರಕಾಶ್ ಗೌಡ ಉಪಸ್ಥಿತರಿದ್ದರು.

ಸಾಹಿತ್ಯ ಸಿಂಚನ

ಒಂದು ಹೊಸ ಆರಂಭ

ಕತ್ತಲೆಯ ರಾತ್ರಿ ಕಳೆದು ಹೋಯಿತು,
ಹೊಸ ಬೆಳಕಿನ ಕಿರಣ ಮೂಡಿ ಬಂತು,
ನಿನ್ನೆಗಿನ ನೋವು ಮರೆತು ಇಂದು,
ಹೊಸ ಕನಸಿನ ಹಾದಿ ತೆರೆದು ಬಂತು.

ಬಿದ್ದ ಹೆಜ್ಜೆಗಳು ಪಾಠ ಕಲಿಸಿದವು,
ಸೋತ ಕನಸುಗಳು ಧೈರ್ಯ ತುಂಬಿದವು,
ಕಣ್ಣೀರ ಹನಿಗಳು ಮುತ್ತಾದವು,
ಮೌನದ ಮಾತುಗಳು ಕವಿತೆಯಾದವು.

ಹಳೆಯ ನೆನಪುಗಳಿಗೆ ವಿದಾಯ ಹೇಳಿ,
ಹೊಸ ಆಸೆಗಳಿಗೆ ರೆಕ್ಕೆ ಕಟ್ಟಿ,
ಮನದ ಬಾಗಿಲು ತೆರೆದು ನಿಂತಾಗ,
ಸಂತಸದ ಗಾಳಿ ಒಳಗೆ ಬಂತು.

ದಾರಿ ಕಠಿಣವಾದರೂ ಹೆದರದಿರು,
ಗುರಿ ದೂರವಾದರೂ ನಿಲ್ಲದಿರು,
ಪ್ರತಿ ಹೆಜ್ಜೆಯೂ ಭರವಸೆಯಾಗಲಿ,
ಪ್ರತಿ ದಿನವೂ ಹೊಸ ಕನಸಾಗಲಿ.

ಬದುಕಿನ ಪುಸ್ತಕದ ಹೊಸ ಪುಟದಲ್ಲಿ,
ಭರವಸೆಯ ಅಕ್ಷರ ಬರೆಯೋಣ,
ನಿನ್ನೆಯ ನೆರಳನ್ನು ಹಿಂದೆ ಬಿಟ್ಟು,
ನಾಳೆಯ ಬೆಳಕಿನತ್ತ ಸಾಗೋಣ.

ಒಂದು ಹೊಸ ಆರಂಭ ಇಂದು ನಮ್ಮದಾಗಲಿ,
ಬದುಕಿನ ಪಯಣ ಸುಂದರವಾಗಲಿ!

ಕೇಸೂರ ಗ್ರಾಮ ಪಂಚಾಯಿತಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಕೇಸೂರ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಇಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.



ಈ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಗೌರವ ಸಲ್ಲಿಸುವ ಮೂಲಕ ಅವರ ಜೀವನ, ಸಾಹಿತ್ಯ ಸೇವೆ ಹಾಗೂ ಆದರ್ಶಗಳನ್ನು ಸ್ಮರಿಸಲಾಯಿತು. ರಾಮಾಯಣ ಮಹಾಕಾವ್ಯವನ್ನು ರಚಿಸುವ ಮೂಲಕ ಭಾರತೀಯ ಸಾಹಿತ್ಯ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಮಹರ್ಷಿ ವಾಲ್ಮೀಕಿ ಅವರು ಸಮಾಜಕ್ಕೆ ಧರ್ಮ, ಸತ್ಯ, ನ್ಯಾಯ, ಮಾನವೀಯತೆ ಹಾಗೂ ಉತ್ತಮ ಜೀವನ ಮೌಲ್ಯಗಳ ಸಂದೇಶವನ್ನು ಸಾರಿದ್ದಾರೆ.

ಮಹರ್ಷಿ ವಾಲ್ಮೀಕಿ ಅವರ ಚಿಂತನೆಗಳು ಇಂದಿಗೂ ಸಮಾಜಕ್ಕೆ ಪ್ರೇರಣೆಯಾಗಿದ್ದು, ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣ ಮಾಡಲು ಪ್ರತಿಯೊಬ್ಬರೂ ಪ್ರಯತ್ನಿಸಬೇಕು ಎಂಬ ಸಂದೇಶವನ್ನು ಈ ಜಯಂತಿ ಸಾರುತ್ತದೆ. ಕಾರ್ಯಕ್ರಮದಲ್ಲಿ ಕೇಸೂರ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳು ಹಾಗೂ ಪಂಚಾಯಿತಿಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು, ಮಹರ್ಷಿ ವಾಲ್ಮೀಕಿ ಅವರ ಸ್ಮರಣೆಗೆ ಗೌರವ ಸಲ್ಲಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಆರೋಗ್ಯ ಇಲಾಖೆಯ ಸೇವೆಗಳನ್ನು ನಿಸ್ವಾರ್ಥವಾಗಿ ಜನತೆಗೆ ಒದಗಿಸಿ ಮಹರ್ಷಿ ವಾಲ್ಮೀಕಿಯವರು ನೀಡಿದ ಆದರ್ಶ ಜೀವನದ ಸಂದೇಶಗಳನ್ನು ಸಾರ್ಥಕಗೊಳಿಸೋಣ:ಡಾ ನಂದಿತಾ ಎಮ್ ಎನ್.

ನೈಜ್ಯ ದೆಸೆ ನ್ಯೂಸ್

ರಾಯಚೂರು: ಮಹರ್ಷಿ ವಾಲ್ಮೀಕಿಂಯವರು ಭಾರತೀಯ ಸಾಹಿತ್ಯ ಮತ್ತು ಸಂಸ್ಕೃತಿಗೆ ಅಮೂಲ್ಯ ಕೊಡುಗೆ ನೀಡಿದ ಮಹಾನ್ ದಾರ್ಶನಿಕರು, ಅವರು ರಚಿಸಿದ ರಾಮಾಯಣವು ಯುಗ ಯುಗಗಳಿಂದ ಜನರಿಗೆ ಮಾರ್ಗದರ್ಶನ ನೀಡುತ್ತ ಬಂದಿದೆ. ನಾವೆಲ್ಲರೂ ಆರೋಗ್ಯ ಇಲಾಖೆಯ ಸೇವೆ, ಸೌಲಭ್ಯಗಳನ್ನು ಜನತೆಗೆ ನಿಸ್ವಾರ್ಥದಿಂದ ಒದಗಿಸುವ ಮೂಲಕ ವಾಲ್ಮೀಕಿ ಜಯಂತಿಯನ್ನು ಸಾರ್ಥಕಗೊಳಿಸೋಣವೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ನಂದಿತಾ ಎಮ್ ಎನ್ ತಿಳಿಸಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿಯ ಪೂಜೆ ನೆರವೇರಿಸಿ ಮಾತನಾಡುತ್ತಾ, ಜಯಂತಿಯು ಕೇವಲ ಒಂದು ಆಚರಣೆಯಲ್ಲ ಅದು ಜ್ಞಾನ, ಪರಿವರ್ತನೆ, ಸಮಾನತೆ ಮತ್ತು ಮಾನವೀಯ ಮೌಲ್ಯಗಳನ್ನು ಪುನಃ ಸ್ಮರಿಸುವುದಾಗಿದೆ. ಅವರ ಆದರ್ಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಜೊತೆಗೆ, ಜ್ಞಾನ, ಸಮಾನತೆ ಮತ್ತು ಮಾನವೀಯತೆಯ ಬೆಳಕನ್ನು ಸಮಾಜದ ಪ್ರತಿಯೊಬ್ಬರಿಗೂ ತಲುಪಿಸುವುದಾಗಿದೆ. ಪ್ರಸ್ತುತ ಗ್ರಾಮೀಣ, ನಗರ ಪ್ರದೇಶಗಳಲ್ಲಿ ಸರಕಾರಿ ಆಸ್ಪತ್ರೆಗಳಿಗೆ ಚಿಕಿತ್ಸೆಗೆ ಆಗಮಿಸುವ ಜನತೆಗೆ ಸೌಜನ್ಯಯುತವಾಗಿ ಸ್ಪಂದಿಸಿ, ಈಗ ನೀಡುತ್ತಿರುವ ಗುಣಮಟ್ಟದ ತಾಯಿ ಮಗುವಿನ ಸೇವೆ ಸೇರಿದಂತೆ ಎಲ್ಲ ಸೇವೆಗಳನ್ನು ಇನ್ನು ಉತ್ತಮಗೊಳಿಸಿ, ಸಮರ್ಪಣಾ ಭಾವದಿಂದ ಕರ್ತವ್ಯ ನಿರ್ವಹಿಸಿ ಮಾನವೀಯತೆಯಿಂದ ಕೂಡಿದ ಸುಂದರ ಸಮಾಜದ ನಿರ್ಮಾಣಕ್ಕೆ ನಾವೆಲ್ಲರೂ ಕೈ ಜೋಡಿಸೋಣ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ಗಣೇಶ್ ಕೆ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ವಿವಿಧ ವಿಭಾಗಗಳ ಸಿಬ್ಬಂದಿಯವರಾದ, ಎಎಸ್‌ಓ ಮಲ್ಲಿಕಾರ್ಜುನ, ಅಡಿವೆಪ್ಪ, ತಂಗಮ್ಮ, ಶರಣಬಸವ ಪಾಟೀಲ್, ಕನಕಾಚಲ ಪದಕಿ, ಮಹೇಶ, ಮೃತ್ಯುಂಜಯ, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಹರ್ಷಿ ವಾಲ್ಮೀಕಿಯವರ ಆದರ್ಶಗಳು ಸಮಾಜಕ್ಕೆ ದಾರಿದೀಪ: ಹಾಜಿ ಚೌದ್ರಿ

ನೈಜ್ಯ ದೆಸೆ ನ್ಯೂಸ್

ಸಿರವಾರ: ಮಹರ್ಷಿ ವಾಲ್ಮೀಕಿ ಜಯಂತಿಯ ಅಂಗವಾಗಿ ಸಿರವಾರ ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಹಾಜಿ ಚೌದ್ರಿ ಅವರು ಪಟ್ಟಣದ ಹಾಗೂ ನಾಡಿನ ಸಮಸ್ತ ಜನತೆಗೆ ಹಾರ್ದಿಕ ಶುಭಾಶಯಗಳನ್ನು ಕೋರಿದರು.

ಮಹರ್ಷಿ ವಾಲ್ಮೀಕಿಯವರು ರಾಮಾಯಣ ಮಹಾಕಾವ್ಯವನ್ನು ರಚಿಸಿದ ಮಹಾನ್ ಆದಿಕವಿಯಾಗಿದ್ದು, ಭಾರತೀಯ ಸಾಹಿತ್ಯ ಮತ್ತು ಸಂಸ್ಕೃತಿಯಲ್ಲಿ ವಿಶಿಷ್ಟ ಸ್ಥಾನವನ್ನು ಹೊಂದಿದ್ದಾರೆ. ಅವರ ಜೀವನ ಮತ್ತು ಆದರ್ಶಗಳು ಸತ್ಯ, ಧರ್ಮ, ಜ್ಞಾನ, ತ್ಯಾಗ ಹಾಗೂ ಮಾನವೀಯ ಮೌಲ್ಯಗಳ ಮಹತ್ವವನ್ನು ಸಾರುತ್ತವೆ. ಅವರ ಸಂದೇಶಗಳು ಇಂದಿನ ಸಮಾಜಕ್ಕೂ ಪ್ರಸ್ತುತವಾಗಿದ್ದು, ಪ್ರತಿಯೊಬ್ಬರೂ ಉತ್ತಮ ಚಿಂತನೆ ಹಾಗೂ ಸತ್ಕಾರ್ಯಗಳ ಮೂಲಕ ಸಮಾಜದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಈ ಸಂದರ್ಭದಲ್ಲಿ ಆಶಯ ವ್ಯಕ್ತಪಡಿಸಿದರು.

ಸಮಾಜದಲ್ಲಿ ಜಾತಿ, ಧರ್ಮ ಮತ್ತು ಭಾಷೆಯ ಭೇದಭಾವವಿಲ್ಲದೆ ಎಲ್ಲರೂ ಸಹೋದರತ್ವ, ಪ್ರೀತಿ ಮತ್ತು ಸೌಹಾರ್ದತೆಯಿಂದ ಬದುಕಬೇಕು. ಬಡವರು, ಹಿಂದುಳಿದವರು ಹಾಗೂ ಅಸಹಾಯಕರಿಗೆ ನೆರವಾಗುವ ಮನೋಭಾವ ಬೆಳೆಸಿಕೊಳ್ಳಬೇಕು. ಶಿಕ್ಷಣಕ್ಕೆ ಆದ್ಯತೆ ನೀಡಿ ಯುವಜನತೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಂದೇಶ ನೀಡಿದರು.

ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬ ನಾಗರಿಕನ ಪ್ರಾಮಾಣಿಕತೆ, ಕರ್ತವ್ಯನಿಷ್ಠೆ ಮತ್ತು ಸಾಮಾಜಿಕ ಜವಾಬ್ದಾರಿ ಮುಖ್ಯವಾಗಿದೆ. ಸಾರ್ವಜನಿಕ ಆಸ್ತಿಯನ್ನು ಕಾಪಾಡುವುದು, ಕಾನೂನನ್ನು ಗೌರವಿಸುವುದು ಹಾಗೂ ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯವನ್ನು ಬೆಳೆಸುವುದು ಎಲ್ಲರ ಕರ್ತವ್ಯವಾಗಿದೆ. ಮಹರ್ಷಿ ವಾಲ್ಮೀಕಿಯವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಸಮಾಜ ನಿರ್ಮಾಣಕ್ಕೆಪ್ರತಿಯೊಬ್ಬರೂಶ್ರಮಿಸಬೇಕು ಎಂದು ಹಾಜಿ ಚೌದ್ರಿ ಅವರು ಆಶಯ ವ್ಯಕ್ತಪಡಿಸಿದರು.

ಮಹರ್ಷಿ ವಾಲ್ಮೀಕಿಂಯವರ ಜೀವನ ಸಂದೇಶವು ಸಮಾಜದಲ್ಲಿ ಸಮಾನತೆ, ಮಾನವೀಯತೆ ಮತ್ತು ಸಹೋದರತ್ವವನ್ನು ಬೆಳೆಸಲಿ. ನಾಡಿನ ಜನರ ಬದುಕಿನಲ್ಲಿ ಸುಖ, ಶಾಂತಿ ಮತ್ತು ಸಮೃದ್ಧಿ ನೆಲೆಸಲಿ ಎಂದು ಅವರು ಹಾರೈಸಿದರು.



ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಮುಖ್ಯ ಅಧಿಕಾರಿ ಜಗನ್ನಾಥ್ ಜೋಶಿ ಅಧ್ಯಕ್ಷ ಹಾಜಿ ಚೌದ್ರಿ , ಉಪಾಧ್ಯಕ್ಷೆ ಲಕ್ಷ್ಮಿ ಆದಪ್ಪ ನಾಯಕ, ಸದಸ್ಯರಾದ ಸೂರಿ ದುರ್ಗಣ್ಣ, ಮೌಲಾಸಾಬ್ ವರ್ಚಸ್, ಮಾರಕಪ್ಪ, ರಂಗನಾಥ ಬೋವಿ, ಬಂದೆ ನವಾಜ್, ಗ್ಯಾನಪ್ಪ ಮತ್ತು ಸಿಬ್ಬಂದಿ ವರ್ಗ ಸೌಮ್ಯ, ಲಕ್ಷ್ಮಿ , ಚಾಂದು ಪಾಷಾ, ವಿಕಲಚೇತನರ ಪುನರ್ವಸತಿ ಸಿಬ್ಬಂದಿ ನಂದಕುಮಾರ್, ಮಾಜಿ ಉಪಾಧ್ಯಕ್ಷ ಚನ್ನಬಸವ ಗಡ್ಲ , ಭರತ್ ನಾಯಕ,. ಯಲ್ಲಪ್ಪ ದೊರೆ. ಸಮುದಾಯದ ಸಂಘಟನಾಧಿಕಾರಿ ಹಂಪಯ್ಯ ಪಾಟೀಲ್, ಮಾಜಿ ಅಧ್ಯಕ್ಷ ಭೂಪನಗೌಡ , ಹಿರಿಯ ಮುಖಂಡರಾದ ಕಲ್ಲೂರ್ ಬಸವರಾಜ್ ನಾಯಕ, ಮಲ್ಲಪ್ಪ ಕಜ್ಜಿ, ಸೇರಿದಂತೆ ಹಲವಾರು ಪಟ್ಟಣ ಪಂಚಾಯಿತಿ ಸಿಬ್ಬಂದಿ ವರ್ಗದವರು ಹಾಗೂ ಇನ್ನು ಹಲವಾರು ಉಪಸ್ಥಿತಿರಿದ್ದರು.

ತಾಳಿಕೋಟಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ತಾಲೂಕು ಆಡಳಿತ, ತಾಲೂಕು ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ತಾಳಿಕೋಟಿ ಪುರಸಭೆಯ ಸಂಯುಕ್ತ ಆಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಪಟ್ಟಣದಲ್ಲಿ ಸೋಮವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಜಯಂತಿಯ ಅಂಗವಾಗಿ ಪಟ್ಟಣದ ವಿವಿಧ ಸರ್ಕಾರಿ ಶಾಲೆಗಳು, ಕಚೇರಿಗಳು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಅರ್ಪಿಸಲಾಯಿತು. ಬಳಿಕ ದೇವರಹಿಪ್ಪರಗಿ ರಸ್ತೆಯಲ್ಲಿರುವ ಶ್ರೀ ವಾಲ್ಮೀಕಿ ವೃತ್ತದಲ್ಲಿ ತಾಲೂಕು ಆಡಳಿತ ಹಾಗೂ ವಾಲ್ಮೀಕಿ ಸಮಾಜದ ಸಹಯೋಗದಲ್ಲಿ ವಿಶೇಷ ಪೂಜೆ ನೆರವೇರಿಸಲಾಯಿತು. ನಂತರ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ನಡೆದ ವೇದಿಕೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಹಸೀಲ್ದಾರ್ ಎಂ.ಎಸ್. ಅರಕೇರಿ ವಹಿಸಿದ್ದರು. ಈ ಸಂದರ್ಭದಲ್ಲಿ ಸಮಾಜದ ಮುಖಂಡ ಶರಣಗೌಡ ಪೊಲೀಸ್ ಪಾಟೀಲ ಹಾಗೂ ನ್ಯಾಯವಾದಿ ಪ್ರಭಾಕರ ಗುಡಗುಂಟಿ ಅವರು ಮಹರ್ಷಿ ವಾಲ್ಮೀಕಿ ಅವರ ಜೀವನ, ಆದರ್ಶಗಳು ಹಾಗೂ ಸಮಾಜಕ್ಕೆ ಅವರು ನೀಡಿದ ಸಂದೇಶದ ಕುರಿತು ಮಾತನಾಡಿದರು. ಮುದ್ದೇಬಿಹಾಳ ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ. ದಮ್ಮೂರಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.



ವಿದ್ಯಾರ್ಥಿಗಳ ಸಾಧನೆಗೆ ಗೌರವ: ಈ ಬಾರಿಯ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಾಲ್ಮೀಕಿ ಸಮಾಜದ ವಿದ್ಯಾರ್ಥಿಗಳನ್ನು ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಗುರುತಿಸುವ ಮೂಲಕ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಲಾಯಿತು. ಕಾರ್ಯಕ್ರಮದ ಉಸ್ತುವಾರಿಯನ್ನು ವಾಲ್ಮೀಕಿ ಸಮಾಜದ ಗಣ್ಯರಾದ ಕಾಶಿನಾಥ ಪಾಟೀಲ ವಹಿಸಿದ್ದರು. ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಅನುಸೂಯಾ ಚಲವಾದಿ, ಪುರಸಭೆ ಮುಖ್ಯಾಧಿಕಾರಿ ಸುನಿಲ್ ಪಾಟೀಲ, ತಾಳಿಕೋಟಿ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಅಶೋಕ ಜಿ. ಬಿರಾದಾರ, ಪಿಎಸ್‌ಐ ಜ್ಯೋತಿ ಕೋತ್, ಸಮಾಜ ಕಲ್ಯಾಣ ಇಲಾಖೆಯ ಶಿವಲಿಂಗ ಹಚಡದ, ಕೃಷಿ ಅಧಿಕಾರಿ ಮಹೇಶ ಜೋಶಿ, ವಾಲ್ಮೀಕಿ ಸಮಾಜದ ಹಿರಿಯರಾದ ದಂಡಪ್ಪ ಬಾಗೇವಾಡಿ, ಸಮಾಜದ ಅಧ್ಯಕ್ಷ ಬಸವರಾಜ ದೇವದುರ್ಗ, ಯಮನಪ್ಪ ಬರ್ದೇನಾಳ, ಜಗದೀಶ ಪಾಟೀಲ, ಹಣಮಂತ ಮೇಲಿನಮನಿ, ಶ್ರೀಕಾಂತ ಕೊಡೆಕಲ್ಲ, ಮಲ್ಲು ಬಲಶೆಟ್ಟಿಹಾಳ, ಎಸ್.ಎನ್. ಮಲ್ಲಾಡೆ, ಎಸ್.ಎಂ. ಕಲಬುರ್ಗಿ, ಮಹಾಂತೇಶ ತಾಳಿಕೋಟಿ ಸೇರಿದಂತೆ ಸಮಾಜದ ಗಣ್ಯರು, ಹಿರಿಯರು ಹಾಗೂ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ನಿಲಯ ಪಾಲಕ ಎನ್.ಎಸ್. ಕೋರಿ ಸ್ವಾಗತಿಸಿದರು. ಸಿ.ಆರ್.ಸಿ. ರಾಜು ವಿಜಾಪುರ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕ ವಿ.ಬಿ. ನಾಯ್ಕೋಡಿ ವಂದಿಸಿದರು.

ಜನಮನ ಗೆದ್ದ ಶಾಸಕ ನಾರಾ ಭರತ್‌ರೆಡ್ಡಿ ಜನ್ಮದಿನೋತ್ಸವ: ಕಂಪ್ಲಿ ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಬ್ರೆಡ್, ಹಣ್ಣು-ಹಾಲು ವಿತರಣೆ



ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರ ಜನ್ಮದಿನದ ಅಂಗವಾಗಿ ವೀರಶೈವ ಲಿಂಗಾಯತ ಮಹಾ ವೇದಿಕೆ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪಟ್ಟಣದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಭಾನುವಾರ ರೋಗಿಗಳಿಗೆ ಹಾಗೂ ಬಾಣಂತಿಯರಿಗೆ ಹಾಲು, ಹಣ್ಣು ಮತ್ತು ಬ್ರೆಡ್ ವಿತರಿಸಿದರು.

ನಂತರ ಮಾತನಾಡಿದ ಹೊಸಕೋಟೆ ಜಗದೀಶ, "ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ನಿರಂತರವಾಗಿ ಜನಪರ ಹಾಗೂ ಅಭಿವೃದ್ಧಿ ಕಾರ್ಯಗಳ ಮೂಲಕ ಸಾರ್ವಜನಿಕರ ಸೇವೆ ಸಲ್ಲಿಸುತ್ತಿದ್ದಾರೆ. ಬಡವರು ಹಾಗೂ ಮಧ್ಯಮ ವರ್ಗದವರ ಕಷ್ಟ ಸುಖಗಳಿಗೆ ಸ್ಪಂದಿಸುವ ಮೂಲಕ ಜನರ ಪಾಲಿಗೆ ಆಶಾಕಿರಣವಾಗಿದ್ದಾರೆ. ಕ್ಷೇತ್ರದ ಜನರ ನಾಡಿಮಿಡಿತ ಅರಿತು ಕೆಲಸ ಮಾಡುತ್ತಿರುವ ಇವರಿಗೆ ಆ ದೇವರು ಆಯುಸ್ಸು, ಆರೋಗ್ಯ, ಸಮೃದ್ಧಿ ದಯಪಾಲಿಸಲಿ" ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಆಯುಷ್ ವೈದ್ಯ ಡಾ. ಮಲ್ಲೇಶಪ್ಪ, ವೀರಶೈವ ಲಿಂಗಾಯತ ಮಹಾ ವೇದಿಕೆಯ ಕಂಪ್ಲಿ ತಾಲೂಕು ಅಧ್ಯಕ್ಷ ಬಳೇ ಮಲ್ಲಿಕಾರ್ಜುನ, ಪ್ರಮುಖರಾದ ಅರವಿ ಬಸವನಗೌಡ, ಬಿ. ನಾರಾಯಣಪ್ಪ, ಕೇಶವರೆಡ್ಡಿ, ಕರಿಬಸವನಗೌಡ, ಬಟಾರಿ ಪ್ರಮೋದ್, ವಿ.ಬಿ. ನಾಗರಾಜ, ಬಳ್ಳಾಪುರ ಲಿಂಗಪ್ಪ, ಹಂಪಾರೆಡ್ಡಿ, ಎಚ್. ಗಂಗಾಧರ, ಮೆಟ್ರಿ ರಾಜ, ನಾಯಕರ ತಿಮ್ಮಯ್ಯ, ಗೌಡ್ರು ನಾಗರಾಜ, ಎಚ್. ಗಾಳೆಪ್ಪ, ಬಳ್ಳಾಪುರ ಮೌನೇಶ್, ಯಲ್ಲಪ್ಪ ಸೇರಿದಂತೆ ಹಲವು ಮುಖಂಡರು ಹಾಗೂ ಯುವಕರು ಉಪಸ್ಥಿತರಿದ್ದರು.

ವಾಲ್ಮೀಕಿ ಮಹರ್ಷಿಗಳ ತತ್ತ್ವ, ಸಿದ್ಧಾಂತಗಳು ಎಲ್ಲ ಕಾಲಕ್ಕೂ ಆದರ್ಶ ದೊಡ್ಡನಗೌಡ ಎಚ್ ಪಾಟೀಲ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ನಗರದ ವಾಲ್ಮೀಕಿ ವೃತ್ತದಲ್ಲಿ ಸೋಮವಾರ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ಅವರ ಪ್ರತಿಮೆಗೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ದೊಡ್ಡನಗೌಡ ಎಚ್. ಪಾಟೀಲ ಅವರು, ಮಹರ್ಷಿ ವಾಲ್ಮೀಕಿ ತಮ್ಮ ತಪಸ್ಸು, ಜ್ಞಾನ ಹಾಗೂ ಅಪಾರ ಪಾಂಡಿತ್ಯದ ಮೂಲಕ ರಾಮಾಯಣ ಮಹಾಕಾವ್ಯವನ್ನು ರಚಿಸಿ ಜಗತ್ತಿಗೆ ಅಮೂಲ್ಯ ಸಂದೇಶ ನೀಡಿದ್ದಾರೆ. ಅವರ ಸಾಹಿತ್ಯವು ಧಾರ್ಮಿಕ ಗ್ರಂಥಕ್ಕೆ ಮಾತ್ರ ಸೀಮಿತವಾಗದೆ, ಮಾನವೀಯ ಮೌಲ್ಯಗಳು, ಸತ್ಯ, ಧರ್ಮ, ನ್ಯಾಯ, ತ್ಯಾಗ ಹಾಗೂ ಕರ್ತವ್ಯಪ್ರಜ್ಞೆಯ ಮಹತ್ವವನ್ನು ಸಾರುತ್ತದೆ ಎಂದು ಹೇಳಿದರು.



ಮಹರ್ಷಿ ವಾಲ್ಮೀಕಿ ಅವರ ಜೀವನ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕವಾಗಿದೆ. ಅವರ ಬದುಕಿನ ಸಂದೇಶಗಳನ್ನು ಅರಿತು ಸಮಾಜದಲ್ಲಿ ಉತ್ತಮ ಗುಣಗಳನ್ನು ಬೆಳೆಸಿಕೊಳ್ಳಬೇಕು. ತಮ್ಮ ಜ್ಞಾನ ಮತ್ತು ಸಾಧನೆಯ ಮೂಲಕ ಸಮಾಜಕ್ಕೆ ಅಪಾರ ಕೊಡುಗೆ ನೀಡಿರುವ ಮಹರ್ಷಿಗಳ ಆದರ್ಶಗಳು ಇಂದಿನ ಪೀಳಿಗೆಗೂ ಮಾರ್ಗದರ್ಶನ ನೀಡುತ್ತವೆ ಎಂದರು.

ವಾಲ್ಮೀಕಿ ಜಯಂತಿ ಆಚರಣೆ ಕೇವಲ ಮಹರ್ಷಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದಕ್ಕೆ ಸೀಮಿತವಾಗಬಾರದು. ಅವರ ವಿಚಾರಧಾರೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಸಮಾನತೆ, ಸಹೋದರತ್ವ, ಪರಸ್ಪರ ಗೌರವ ಹಾಗೂ ಸಾಮರಸ್ಯವನ್ನು ಬೆಳೆಸಬೇಕು. ಯುವಜನರು ಮಹರ್ಷಿ ವಾಲ್ಮೀಕಿ ಅವರ ಜೀವನ ಚರಿತ್ರೆ ಮತ್ತು ಸಾಧನೆಗಳನ್ನು ತಿಳಿದುಕೊಂಡು ಉತ್ತಮ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಕರೆ ನೀಡಿದರು.

ಸಮಾಜದ ಎಲ್ಲರೂ ಒಗ್ಗಟ್ಟಿನಿಂದ ಮುನ್ನಡೆಯುವ ಮೂಲಕ ಶಿಕ್ಷಣ, ಸಾಮಾಜಿಕ ಜಾಗೃತಿ ಹಾಗೂ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ದೊಡ್ಡನಗೌಡ ಎಚ್. ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ದೊಡ್ಡಬಸನಗೌಡ ಬಯ್ಯಾಪುರ, ವಾಲ್ಮೀಕಿ ಸಮಾಜದ ಅಧ್ಯಕ್ಷ ಮಾನಪ್ಪ ತಳವಾರ, ಪಿಎಸ್‌ಐ ಹನಮಂತಪ್ಪ ಎಚ್. ತಳವಾರ, ಬಿಜೆಪಿ ಮುಖಂಡ ಕೆ. ಮಹೇಶ, ವಿಜಯಕುಮಾರ ಹಿರೇಮಠ, ಸಂಗನಗೌಡ ಜೈನರ, ಮನೋಹರ ಗದಿಗೇರಿ, ರಮೇಶ ಕೋನಸಾಗರ, ಕಲ್ಲೇಶ ತಾಳದ, ನಾಗರಾಜ ಹಜಾಳ, ಶೇಕಪ್ಪ ಪೂಜಾರಿ, ಅಮರೇಶ ತಳವಾರ, ಈರಪ್ಪ ನಾಯಕ, ಬಸವರಾಜ ಹಜಾಳ, ಶಿವು ನಾಯಕ, ಸುರೇಶ ನಾಯಕ, ವಕೀಲ ರಮೇಶ ಬಾವಿಕಟ್ಟಿ, ದ್ಯಾಮಣ್ಣ ತಳವಾರ, ಬಾಗಪ್ಪ ತಳವಾರ ಸೇರಿದಂತೆ ಸಮಾಜದ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

ನೇಮಕಾತಿ ಪ್ರಕಟಣೆ

ISRO URSC ನೇಮಕಾತಿ 2026 ? 61 ಟೆಕ್ನಿಷಿಯನ್ ಮತ್ತು ಚಾಲಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಅಕ್ಟೋಬರ್ 24, 2026

ISRO URSC ನೇಮಕಾತಿ 2026: 61 ಟೆಕ್ನಿಷಿಯನ್–ಬಿ (Technician-B) ಮತ್ತು ಚಾಲಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ISRO ಯು.ಆರ್. ರಾವ್ ಸ್ಯಾಟಲೈಟ್ ಸೆಂಟರ್ (ISRO URSC), ಅಕ್ಟೋಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಟೆಕ್ನಿಷಿಯನ್–ಬಿ ಮತ್ತು ಚಾಲಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕದ ಬೆಂಗಳೂರಿನಲ್ಲಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 13–ನವೆಂಬರ್–2026 ರಂದು ಅಥವಾ ಅದಕ್ಕೂ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: isro.gov.in

ಶ್ರೀ ಮಹರ್ಷಿ ವಾಲ್ಮೀಕಿಯವರು ಮನುಕುಲಕ್ಕೆ ಆದರ್ಶಪ್ರಾಯರು: ಲಕ್ಷ್ಮಣ ಪಿಡಿಒ

❑ ನೈಜ್ಯ ದೆಸೆ ನ್ಯೂಸ್

ಹಾಲಾಪೂರ: ಗ್ರಾಮ ಪಂಚಾಯತಿಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂಜಾ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಶ್ರೀ ಲಕ್ಷ್ಮಣ ಪಂಚಾಯತ ಅಭಿವೃದ್ಧಿ ಅಧಿಕಾರಿ ಮಾತನಾಡಿ ಶ್ರೀ ಮಹರ್ಷಿ ವಾಲ್ಮೀಕಿ ಅವರು ವಿಶ್ವದ ಮಹಾನ್ ಸತ್ಪುರುಷರು, ಇಡೀ ಮನುಕುಲಕ್ಕೆ ಆದರ್ಶಪ್ರಾಯರು ಅವರು ರಚಿಸಿದ ಜಗತ್ತಿನ ಪ್ರಪ್ರಥಮ ಮಹಾಕಾವ್ಯ ರಾಮಾಯಣ ರಚಿಸಿದ ಹೆಗ್ಗಳಿಕೆ ಇವರದಾಗಿದ್ದು, ಇವರನ್ನು ಆದಿಕವಿ ಎಂದು ಗೌರವಿಸಲಾಗುತ್ತದೆ



ಅದಕ್ಕಾಗಿ ಇಂತಹ ಆದರ್ಶ ಪುರುಷರ ತತ್ವ ವಿಚಾರಗಳನ್ನು ನಾವು ಜೀವನದಲ್ಲಿ ಅಳವಡಿಸಿಕೊಂಡು ಬದುಕಬೇಕು, ಜೀವನದಲ್ಲಿ ಆದರ್ಶ ಮೌಲ್ಯಗಳು, ವಿಚಾರಗಳು ಅವಶ್ಯಕತೆ, ಹೀಗಾಗಿ ಪ್ರತಿಯೊಬ್ಬರು ಅರ್ಥ ಮಾಡಿಕೊಂಡು ಬದುಕುವುದೇ ನಿಜವಾದ ಮನುಷ್ಯತ್ವ ಮಾನವೀಯತೆ, ಅದನ್ನು ಮರೆತರೆ ಮನುಷ್ಯತ್ವ ಅಲ್ಲ ಎಂಬುದು ಅರಿತುಕೊಳ್ಳಬೇಕು ಎಂದು ಲಕ್ಷ್ಮಣ ಪಂಚಾಯತ ಅಭಿವೃದ್ಧಿ ಅಧಿಕಾರಿ ಹೇಳಿದರು, ಈ ಸಂದರ್ಭದಲ್ಲಿ ಗ್ರೇಡ್ ಒನ್ ಸೆಕ್ರೆಟರಿ ಪರಣ್ಣ, ಸಿಬ್ಬಂದಿಗಳಾದ ಆನಂದ, ಶ್ರೀದೇವಿ, ಹನುಮಂತ , ಮುರ್ತುಜಾ ಸಾಬ್, ಅಮರೇಶ, ಶಿವಪ್ಪ ಇನ್ನಿತರರು ಇದ್ದರು.

ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಹಾಲಾಪೂರ: ಗ್ರಾಮದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ನಾಮಫಲಕ ಹಾಗೂ ವಾಲ್ಮೀಕಿ ಭವನದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂಜಾ ಕಾರ್ಯಕ್ರಮ ನಡೆಯಿತು. ಶ್ರೀ ಮಹರ್ಷಿ ವಾಲ್ಮೀಕಿಯವರು ವಿಶ್ವದ ಮಹಾನ್ ಸತ್ಪುರುಷರು, ಇಡೀ ಮನುಕುಲಕ್ಕೆ ಆದರ್ಶಪ್ರಾಯರು ಅವರು ರಚಿಸಿದ ಜಗತ್ತಿನ ಪ್ರಪ್ರಥಮ ಮಹಾಕಾವ್ಯ ಶ್ರೀ ರಾಮಾಯಣವು ರಚಿಸಿದ ಹೆಗ್ಗಳಿಕೆ



ಇವರದಾಗಿದ್ದು, ಇವರನ್ನು ಆದಿಕವಿ ಎಂದು ಗೌರವಿಸಲಾಗುತ್ತದೆ , ಅದಕ್ಕಾಗಿ ಇಂತಹ ಆದರ್ಶ ಪುರುಷರ ತತ್ವ ವಿಚಾರಗಳನ್ನು ನಾವು ಜೀವನದಲ್ಲಿ ಅಳವಡಿಸಿಕೊಂಡು ಬದುಕಬೇಕು, ಆದರ್ಶ ಮೌಲ್ಯಗಳಿಂದ ಬದುಕುವುದೇ ನಿಜವಾದ ಮನುಷ್ಯತ್ವ ಮಾನವೀಯತೆ ಎಂಬುವುದೇ ಶ್ರೀ ಮಹರ್ಷಿ ವಾಲ್ಮೀಕಿಯವರ ಸಂದೇಶ ಅದಕ್ಕಾಗಿ ಸಮಾಜದಲ್ಲಿ ಪರಸ್ಪರರು ಒಳ್ಳೆಯ ಸಂಬಂಧ ಬಾಂಧವ್ಯ ಕೂಡಿ ಜೀವಿಸಬೇಕು, ಒಬ್ಬರನ್ನೊಬ್ಬರು ಅರ್ಥ ಮಾಡಿಕೊಳ್ಳಬೇಕು , ವೈಷಮ್ಯ, ಕಲಹ ದ್ವೇಷ ಬಿಡಬೇಕು ಎಲ್ಲರೂ ಪ್ರೀತಿ ವಿಶ್ವಾಸದಿಂದ ವರ್ತಿಸಬೇಕು ಅದರಂತೆ ಜೀವಿಸಬೇಕು ಇದೇ ನಿಜವಾದ ಮಾನವೀಯತೆ ಶ್ರೀ ಮಹರ್ಷಿ ವಾಲ್ಮೀಕಿಯವರ ತತ್ವ. ಈ ಸಂದರ್ಭದಲ್ಲಿ ಊರಿನ ಗುರುಹಿರಿಯರು, ವಾಲ್ಮೀಕಿ ಸಮಾಜದ ಬಾಂಧವರು, ಇನ್ನಿತರರು ಉಪಸ್ಥಿತರಿದ್ದರು.

ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಲ್ಮೀಕಿ ನಾಮಫಲಕ್ಕಕೆ ಮಾಲಾರ್ಪಣೆ ಮಾಡುವ ಮುಲಕ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಕವಿತಾಳ: ಪಟ್ಟಣದಲ್ಲಿ ಇಂದು ವಿವಿಧೆಡೆ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಮಹಾತ್ಮರಿಗೆ ಗೌರವ ಸಲ್ಲಿಸಲಾಯಿತು. ಪಟ್ಟಣ ಪಂಚಾಯತಿಯಲ್ಲಿ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಕಿರಿಲಿಂಗಪ್ಪ ಹಾಗೂ ಮುಖಂಡ ತಿಪ್ಪಯ್ಯಸ್ವಾಮಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದರು.






ನಂತರ ಕಿರಿಲಿಂಗಪ್ಪ ಅವರು ಮಾತನಾಡಿ ಶ್ರೇಷ್ಠ ಕಾವ್ಯಗಳಲ್ಲೊಂದಾದ ರಾಮಾಯಣವನ್ನು ರಚಿಸುವ ಮೂಲಕ ಜಗತ್ತಿನ ರಾಮನ ಪರಿಚಯವನ್ನು ಮಾಡಿಸಿದ ಮಹಾನ್ ಶ್ರೇಷ್ಟ ಧಾರ್ಶನಿಕರಾದ ಮಹರ್ಷಿ ವಾಲ್ಮೀಕಿಯವರ ಆದರ್ಶ ತತ್ವಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳುವ ಮುಲಕ ನಮ್ಮ ಜೀವನವನ್ನು ಸಾರ್ಥಕತೆಗೊಳಿಸಿಕೊಳ್ಳಬೇಕಾಗಿದೆ ಎಂದರು.

ಪಟ್ಟಣ ಪಂಚಾಯತ್ ಮಾಜಿ ಸದಸ್ಯ ಬಸವರಾಜ್ ಕವಿತಾಳ ಮಾತನಾಡಿದರು. ಈ ಸಂಧರ್ಭದಲ್ಲಿ ಪಟ್ಟಣ ಪಂಚಾಯತ್ ಸದಸ್ಯ ಮಲ್ಲಿಕಾರ್ಜುನಗೌಡ, ಮುಖಂಡರಾದ ಯಮನ್ನಪ ದಿನ್ನಿ, ಓವಣ್ಣ ಕಡತಲ್, ಮೌನೇಶ್ ಹಿರೇಕುರುಬರು, ಅಯ್ಯಪ್ಪತೋಳ, ಖಾಜಾಪಾಷಾ ಬ್ಯಾಗವಾಟ್, ಲಾಳೇಶ್ ನಾಯಕ್, ಯಂಕೋಬ್ ಗಾಗಲ್, ರಫಿ ಒಂಟಿ ಬಂಡಿ, ಯಾಕೂಬ ಕಡತಲ್, ವಾಲ್ಮೀಕಿ ನಾಯಕ ಒಕ್ಕೂಟದ ರಾಜ್ಯ ಸಂಘಟನಾ ಕಾರ್ಯದರ್ಶಿ ಗರುಡ ನಾಯಕ, ಅಮರೇಶ, ಮೋನೇಶ್ ನಾಯಕ್ ದೊರೆ, ಮೌನೇಶ ಕಟ್ಟಿಮನಿ, ಶಿವಣ್ಣತಾತ, ಸಿಬಬಂದಿಗಳಾದ ರಾಘವೇಂದ್ರ ಕುಲ್ಕರ್ಣಿ, ವೆಂಕಟೇಶ್, ದರವೇಶ್ ಇನ್ನಿತರರು ಇದ್ದರು. ವಿವಿಧೆಡೆ ವಾಲ್ಮೀಕಿ ಜಯಂತಿ ಆಚರಣೆ ಮಸ್ಕಿ ಕ್ರಾಸ್ ಹತ್ತಿರವಿರುವ ವಾಲ್ಮೀಕಿ ವೃತ್ತದಲ್ಲಿ ಭಾವಚಿತ್ರಕ್ಕೆ ವಾಲ್ಮೀಕಿ ನಾಯಕ ಒಕ್ಕೂಟದ ರಾಜ್ಯ ಸಂಘಟನಾ ಕಾರ್ಯದರ್ಶಿ ಗರುಡ ನಾಯಕ ಮಾಲರ್ಪಣೆ ಮಾಡುವ ಮೂಲಕ ಗೌರವಸಲ್ಲಿಸಿದರು.

ಪೊಲೀಸ್ ಠಾಣೆ, ಸಮುದಾಯ ಆರೋಗ್ಯ ಕೇಂದ್ರ ಸೇರಿದಂತೆ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಖಾಸಗಿ ಶಾಲೆಗಳಲ್ಲಿ ಮತ್ತು ಸಂಘಸಂಸ್ಥೆಗಳಲ್ಲಿ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆಸಲ್ಲಿಸುವ ಮೂಲಕ ಅರ್ಥ ಪೂರ್ಣವಾಗಿ ಜಯಂತಿಯನ್ನು ಆಚರಿಸಲಾಯಿತು. ಸುತ್ತಮುತ್ತಲಿನ ಗ್ರಾಮಗಳಾದ ಹುಸೇನಪುರ, ಸೈದಾಪೂರ, ಯಕ್ಲಾಸಪೂರ, ಕಾಚಾಪುರ, ವಟಗಲ್, ಯತಗಲ್, ಅಮೀನಗಡ ಸೇರಿದಂತೆ ಇನ್ನಿತರ ಗ್ರಾಮಗಳಲ್ಲಿ ಮಹರ್ಷಿ ವಾಲ್ಮೀಕಿ ನಾಮಫಲಕಗಳಿಗೆ ಗ್ರಾಮದ ವಾಲ್ಮೀಕಿ ಸಮಾಜದ ಹಾಗೂ ಗ್ರಾಮದ ಮುಖಂಡರು ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡುವ ಮುಲಕ ಸಡಗರ ಸಂಭ್ರಮದಿಂದ ಜಯಂತಿಯನ್ನು ಆಚರಿಸಿದರು.

ಬಿ.ಗಣೇಕಲ್ ನಲ್ಲಿ ಅದ್ದೂರಿಯಾಗಿ ವಾಲ್ಮೀಕಿ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಅರಕೇರಾ: ಅರಕೇರಾ ತಾಲೂಕಿನ ಬಿ.ಗಣೇಕಲ್ ಗ್ರಾಮದಲ್ಲಿ ಸಮಸ್ತ ಗ್ರಾಮಸ್ಥರ ವತಿಯಿಂದ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಶ್ರದ್ಧಾ–ಭಕ್ತಿಯಿಂದ ಆಚರಿಸಲಾಯಿತು.



ಕಾರ್ಯಕ್ರಮದ ಪ್ರಾರಂಭದಲ್ಲಿ ಧರ್ಮಣ್ಣ ಪೂಜಾರಿ ಹಾಗೂ ಪಂಚಾಕ್ಷರಿ ಹಿರೇಮಠ ಅವರು ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಗೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿದರು. ನಂತರ ಮಾತನಾಡಿದ ಸಿದ್ದಪ್ಪ ಮಕಾಶಿ ಅವರು, "ವಾಲ್ಮೀಕಿ ಮಹರ್ಷಿಗಳನ್ನು ಆದಿಕವಿ ಎಂದು, ಮಹಾಕಾವ್ಯ ರಾಮಾಯಣದ ಕರ್ತೃ ಎಂದು ಕರೆಯಲಾಗುತ್ತದೆ. ಅವರ ಜೀವನದ ಪ್ರತಿಯೊಂದು ಘಟನೆಯು ಇಂದಿನ ಪೀಳಿಗೆಗೆ ಸ್ಫೂರ್ತಿದಾಯಕವಾಗಿದೆ. ದರೋಡೆಕೋರನಾಗಿದ್ದ ಅವರು ಜ್ಞಾನಿ ಋಷಿಯಾಗಿ ಪರಿವರ್ತನೆಗೊಂಡ ರೀತಿಯು, ಆತ್ಮಸಾಕ್ಷಾತ್ಕಾರ ಮತ್ತು ಕಲಿಕೆಯ ಮೂಲಕ ಪ್ರತಿಯೊಬ್ಬರೂ ತಮ್ಮ ಜೀವನವನ್ನು ಹೇಗೆ ಬದಲಾಯಿಸಿಕೊಳ್ಳಬಹುದು ಎಂಬುದಕ್ಕೆ ಉತ್ತಮ ನಿದರ್ಶನವಾಗಿದೆ. ವಾಲ್ಮೀಕಿ ರಾಮಾಯಣದಲ್ಲಿ ಪ್ರತಿಪಾದಿಸಲಾದ ಧರ್ಮ, ಕರುಣೆ ಮತ್ತು ದೃಢನಿಶ್ಚಯದಂತಹ ಮೌಲ್ಯಗಳನ್ನು ನಾವು ನಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು" ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಕಾರ್ಯದರ್ಶಿ ಆದಿಬಸಪ್ಪ, ಶಿವರಾಜ ಹುಲಿಗುಡ್ಡ, ಮಲ್ಲಯ್ಯ ಪೂಜಾರಿ, ಆಂಜಿನೇಯ್ಯ ದಳವಾಯಿ, ಮಲ್ಲೇಶ ನಾಯಕ, ಶಿವು ಮಂಡ್ಲಿ, ಮಂಜುನಾಥ, ಆಂಜಿನೇಯ್ಯ ಅನ್ವರ, ಸದ್ದಾಂ ಹುಸೇನ್, ಅಜಯ್ ಕುಮಾರ್, ರಂಗಣ್ಣ, ಅನಿಲ ಅಬಕಾರಿ ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು, ವಿವಿಧ ಸಮುದಾಯದ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಕಡೇಕೊಪ್ಪ ಗ್ರಾಮಕ್ಕೆ ಶ್ರೀ ಮದ್ದಾನಿ ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳ ಭೇಟಿ

❑ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಕುಷ್ಟಗಿ ಶ್ರೀ ಮದ್ದಾನೇಶ್ವರ ಶಿಲಾಮಂಟಪ ಲೋಕಾರ್ಪಣೆಯ ರಜತ ಮಹೋತ್ಸವದ ಅಂಗವಾಗಿ ಶ್ರೀ ಮದ್ದಾನಿ ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಕುಷ್ಟಗಿ ತಾಲೂಕಿನ ಕಡೇಕೊಪ್ಪ ಗ್ರಾಮಕ್ಕೆ ಭೇಟಿ ನೀಡಿ, ಮಹೋತ್ಸವದ ಆಹ್ವಾನ ಪತ್ರಿಕೆ ನೀಡಿ ಭಕ್ತರಿಗೆ ಶುಭ ಆಶೀರ್ವಚನ ನೀಡಿದರು.



ಗ್ರಾಮಕ್ಕೆ ಆಗಮಿಸಿದ ಶ್ರೀಗಳನ್ನು ಗ್ರಾಮಸ್ಥರು ಭಜನೆಯ ಮೂಲಕ ದೇವಸ್ಥಾನಕ್ಕೆ ಕರೆತಂದು ಭಕ್ತಿಭಾವದಿಂದ ಸ್ವಾಗತಿಸಿದರು. ಬಳಿಕ ಶ್ರೀಗಳಿಗೆ ಪಾದಪೂಜೆ ನೆರವೇರಿಸಿ, ಸನ್ಮಾನಿಸಿ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀಗಳು, ಶ್ರೀ ಷ.ಬ್ರ. ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳವರ 25ನೇ ವರ್ಷದ ಪಟ್ಟಾಧಿಕಾರ ರಜತ ಮಹೋತ್ಸವ, 53ನೇ ಪುಣ್ಯ ಸ್ವರ್ಣೋತ್ಸವ ಹಾಗೂ ಚರಮೂರ್ತಿಗಳ 40ನೇ ಪುಣ್ಯಾರಾಧನೆಯ ಅಂಗವಾಗಿ 17.03.2027ರ ಮಾರ್ಚ್ 31.03.2027 ರವರೆಗೆ 15 ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮಹೋತ್ಸವದ ಅಂಗವಾಗಿ ಆಧ್ಯಾತ್ಮಿಕ ಪ್ರವಚನಗಳು, ಧರ್ಮಸಭೆ, ಹೋಮ–ಹವನಗಳು, ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ದಾನಿಗಳಿಗೆ ಶ್ರೀರಕ್ಷೆ, ಲಿಂಗದೀಕ್ಷೆ, 25 ಮಠಾಧೀಶರಿಂದ ಮಂಟಪ ಪೂಜೆ ಹಾಗೂ 25 ಸಾವಿರ ಸುಮಂಗಲಿಯ–ರಿಗೆ ಉಡಿತುಂಬುವ ಕಾರ್ಯಕ್ರಮ ಸೇ–ರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಹೇಳಿದರು.

ಶಿಲಾಮಂಟಪ ನಿರ್ಮಾಣಕ್ಕೆ ಸಾಕಷ್ಟು ಹಣ ವೆಚ್ಚ ಮಾಡಲಾಗಿದೆ. ಈ ಮಂಟಪ ಭಕ್ತ–ರಿಗಾಗಿ ನಿರ್ಮಾಣಗೊಂಡಿದ್ದು, ಅದು ಭಕ್ತರ ಆಸ್ತಿಯಾಗಿದೆ. ಆದ್ದರಿಂದ ಭಕ್ತರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಭೂಮಿತಾಯಿಗೆ ಉಡಿ ತುಂಬಿದಾಗ ನಮಗೆ ಎಷ್ಟು ಸಂತೋಷವಾಗುತ್ತದೆಯೋ, ಅದೇ ರೀತಿ ನಮ್ಮ ತಾಯಂದಿರಿಗೆ ಉಡಿ ತುಂಬಿದಾಗಲೂ ಮನಸ್ಸಿಗೆ ಅಪಾರ ಸಂತೋಷವಾಗುತ್ತದೆ. ಇಂತಹ ಧಾರ್ಮಿಕ ಸಂಪ್ರದಾಯಗಳಿಂದ ಸಮಾಜದಲ್ಲಿ ಭಕ್ತಿ, ಸೌಹಾರ್ದತೆ ಮತ್ತು ಸಾಮರಸ್ಯ ಹೆಚ್ಚುತ್ತದೆ. ಜಗತ್ತಿಗೆ ಮಳೆ–ಬೆಳೆ ಸಮೃದ್ಧಿಯಾಗಿ, ನಾಡು ಸುಭಿಕ್ಷವಾಗಲಿ ಎಂಬುದು ನಮ್ಮ ಆಶಯವಾಗಿದೆ ಎಂದು ಶ್ರೀಗಳು ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಕಡೇಕೊಪ್ಪ ಗ್ರಾಮದ ಭಕ್ತರು, ಹಿರಿಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದು, ಶ್ರೀಗಳ ಆಶೀರ್ವಾದ ಪಡೆದರು.

ಜಾಲಹಳ್ಳಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಅದ್ದೂರಿಯಾಗಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಗಣ್ಯರು ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಮಹರ್ಷಿ ವಾಲ್ಮೀಕಿ ಅವರು ತಮ್ಮ ಆದರ್ಶಗಳು ಹಾಗೂ ರಾಮಾಯಣ ಮಹಾಕಾವ್ಯದ ಮೂಲಕ ಸಮಾಜಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಅವರ ಜೀವನದ ಮೌಲ್ಯಗಳು, ಆದರ್ಶಗಳು ಮತ್ತು ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲಕ್ಷ್ಮೀ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ ಅರಕೇರಿ, ಗ್ರಾಮ ಪಂಚಾಯಿತಿ ಸದಸ್ಯರು, ಜಾಲಹಳ್ಳಿ ವಾಲ್ಮೀಕಿ ಸಂಘದ ಅಧ್ಯಕ್ಷ ತಿಮ್ಮಣ್ಣ ನಾಯಕ್ ದಿವಾನ್, ಗೋವಿಂದಪ್ಪ ಆಲ್ಲೇರಿ, ಭೀಮಣ್ಣ ಗುಮೇದಾರ್, ರಂಗನಾಥ ಬಿಸಲ್, ವೆಂಕಣ್ಣ ಯಾರಕಮಟ್ಟಿ, ಭೂತಪ್ಪ ದೇವರಮನಿ, ರಂಗಣ್ಣ ಕೊಲ್ಕಾರ್, ಶರಣಪ್ಪ ಕಾರಲಕುಂಟಿ, ಶಾಂತಕುಮಾರ ಮಕಾಶಿ, ಭೀಮಣ್ಣ ವಿರಗೋಟ, ರಂಗನಾಥ ಮುರಾಳ, ಶಿವನಗೌಡ, ಗೋವಿಂದರಾಜ ನಾಯಕ ತಿಂಪುರ್, ವೆಂಕೋಬ ಪೂಜಾರಿ, ಶಂಕರಗೌಡ, ವೆಂಕೋಬ ತೋಟದ್, ಶಿವಪುತ್ರಪ್ಪ, ರಂಗಪ್ಪ ಬಂಡಿ, ದುರುಗಪ್ಪ ಹಾಗೂ ವೆಂಕೋಬ ಬಿಲ್ ಕಲೆಕ್ಟರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಗಾಂಧಿನಗರದ ಮುದ್ದಿನಪೂಡಿ ಕುಟುಂಬದಿಂದ ಕಾರುಣ್ಯಾಶ್ರಮದ ಆಶ್ರಯದಾತರುಗಳಿಗೆ ಬೆಡ್ ಶೀಟ್ ಗಳ ವಿತರಣೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ತಾಲೂಕಿನ ಗಾಂಧಿನಗರದ ಮುದ್ದಿನಪೂಡಿ ಕುಟುಂಬದ ಹಿರಿಯರಾದ ಎಂ. ವೆಂಕಟರಾಮಾರಾವ್ ಅವರ 60ನೇ ವರ್ಷದ ಜನ್ಮ ಸಾರ್ಥಕ ದಿನದ ಅಂಗವಾಗಿ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀ ಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಆಶ್ರಮದ ಆಶ್ರಯದಾತರುಗಳಿಗೆ ಉತ್ತಮ ಗುಣಮಟ್ಟದ ಬೆಡ್ ಶೀಟ್ ಗಳನ್ನು ವಿತರಿಸಿ ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಎಂ.ವೆಂಕಟರಾಮಾರಾವ್ ಅವರ ಜನ್ಮ ಸಾರ್ಥಕ ದಿನವನ್ನು ಅಪಾರ ಕುಟುಂಬದೊಂದಿಗೆ ಸರಳವಾಗಿ ನೆರವೇರಿಸಿದರು.



ಈ ಕಾರ್ಯಕ್ರಮದಲ್ಲಿ ಕಾರುಣ್ಯ ಕುಟುಂಬದಿಂದ ಎಂ. ವೆಂಕಟರಾಮಾರಾವ್ ಎಂ. ದುರ್ಗಾಜಗದಂಬಾ ಈ ದಂಪತಿಗಳನ್ನು ಗೌರವಿಸಿ ಶುಭ ಕೋರಲಾಯಿತು. ಈ ಕಾರ್ಯಕ್ರಮದಲ್ಲಿ ಭಾರತಿ ಬುರುಗಪಲ್ಲಿ ಮಾತನಾಡಿ ಕಾರುಣ್ಯ ಕುಟುಂಬದಲ್ಲಿ ಆಶ್ರಯ ಪಡೆದಿರುವ ಎಲ್ಲಾ ಹಿರಿಯರುಗಳು ನಮ್ಮ ತಂದೆ ತಾಯಿಗಳಿದ್ದಂತೆ ಸುಮಾರು ವರ್ಷಗಳಿಂದ ಹಿರಿಯರ ಹಾಗೂ ಬುದ್ಧಿಮಾಂದ್ಯರ ಸೇವೆ ಮಾಡುವಂತಹ ಈ ಕಾರುಣ್ಯಾಶ್ರಮವು ಕರುಣೆಯ ಕುಟುಂಬವಾಗಿದೆ. ನನ್ನ ತಂದೆಯವರಾದ ಎಂ. ವೆಂಕಟರಾಮಾರಾವ್ ಅವರ 60ನೇ ವರ್ಷದ ಜನ್ಮದಿನ ನಮ್ಮ ಕುಟುಂಬದ ಎಲ್ಲ ಸದಸ್ಯರಿಗೆ ಈ ಕಾರುಣ್ಯ ಆಶ್ರಮದಲ್ಲಿ ನೆರವೇ–ರಿತ್ತಿರುವುದು ತುಂಬಾ ಸಂತೋಷವನ್ನುಂಟು ಮಾಡಿದೆ. ಸಮಾಜದಿಂದ ತಿರಸ್ಕೃತಗೊಂಡವರನ್ನು ಕರೆದುಕೊಂಡು ಬಂದು ದಾನಿಗಳ ನಿರಂತರ ಸಹಾಯ ಸಹಕಾರದೊಂದಿಗೆ ಮಾಡುತ್ತಿರುವ ಕಾರುಣ್ಯ ಆಶ್ರಮದ ಸೇವೆಗೆ ನಮ್ಮ ಬುರುಗಪಲ್ಲಿ ಕುಟುಂಬ ಹಾಗೂ ಮುದ್ದಿನಪೂಡಿ ಕುಟುಂಬ ಸದಾವಕಾಲ ಸೇವೆಯಲ್ಲಿ ಭಾಗಿಯಾಗುತ್ತದೆ.

ಎಂದು ಮಾತನಾಡಿ ಎಲ್ಲಾ ಆಶ್ರಯದಾತರುಗಳಿಗೆ ಬೆಡ್ ಶೀಟ್ ಗಳನ್ನು ವಿತರಿಸಿ ಮಹಾಪ್ರಸಾದ ಸೇವೆ ಸಲ್ಲಿಸಿದರು. ಈ ಕಾರ್ಯಕ್ರಮದಲ್ಲಿ ಎಂ. ವೆಂಕಟ–ರಾಮಾರಾವ್.ಎಂ. ದುರ್ಗಾ ಜಗದಂಬಾ. ಎಂ.ರಾಜೇಶ. ಎಂ.ರಮ್ಯಶ್ರೀ. ಭಾರತಿ ಬುರುಗಪಲ್ಲಿ. ರಾಮಕೃಷ್ಣ ಬುರುಗಪಲ್ಲಿ.ಪಾವನಿ ಬೆಂಗಳೂರು. ಮಂಜುನಾಥ ರಡ್ಡಿ ಬೆಂಗಳೂರು.ಶಶಿವಂಶಿ. ಭಾನು ಹರ್ಷಿತಾ.ಸುದೀಪ್. ಸುನೈನಾ.ಷಣ್ಮುಖ ಸಾತ್ವಿಕ್.ಪಾರ್ಥಿವ್.ಷಣ್ಮುಖ ಶೌರಿ. ಅಗಸ್ತ್ಯ. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ.ಮರಿಯಪ್ಪ. ವಿದ್ಯಾಶ್ರೀ.ಶಂಕರಮ್ಮ. ಶರಣು ಸ್ವಾಮಿ. ಬಸವ ಸ್ವಾಮಿ ಹಾಗೂ ಗಾಂಧಿನಗರದ ಮುದ್ದಿನಪೂಡಿ ಮತ್ತು ಬುರುಗಪಲ್ಲಿ ಕುಟುಂಬದ ಅನೇಕರು ಉಪಸ್ಥಿತರಿದ್ದರು.

ವಚನ ದರ್ಶನ

ಚಕೋರಂಗೆ ಚಂದ್ರಮನ ಬೆಳಗಿನ ಚಿಂತೆ ಅಂಬುಜಕೆ ಭಾನುವಿನ ಉದಯದ ಚಿಂತೆ ಭ್ರಮರಂಗೆ ಪರಿಮಳದ ಬಂಡುಂಬ ಚಿಂತೆ ಎನಗೆ ನಮ್ಮ ಕೂಡಲಸಂಗನ ಶರಣರ ನೆನೆವುದೆ ಚಿಂತೆ

೧೨ನೇ ಶತಮಾನದ ಸಾಮಾಜಿಕ ಕ್ರಾಂತಿಕಾರಿ, ಭಕ್ತಿ ಚಳುವಳಿಯ ಹರಿಕಾರ ಶ್ರೀ ವಿಶ್ವಗುರು ಬಸವಣ್ಣನವರ ಅತ್ಯಂತ ಜನಪ್ರಿಯ ವಚನವಾಗಿದೆ.ಪ್ರಕೃತಿಯ ಸಹಜ ನಿಯಮಗಳ ಮೂಲಕ ಭಗವಂತ ಮತ್ತು ಭಕ್ತನ ನಡುವೆ ಇರಬೇಕಾದ ಅನನ್ಯ ಮತ್ತು ಅವಿನಾಭಾವ ಸಂಬಂಧವನ್ನು ಬಸವಣ್ಣನವರು ಈ ವಚನದಲ್ಲಿ ಅತ್ಯಂತ ಮಾರ್ಮಿಕವಾಗಿ ವಿವರಿಸಿದ್ದಾರೆ.

ಸರಳ ಭಾವಾರ್ಥ:ಚಕೋರಂಗೆ ಚಂದ್ರಮನ ಬೆಳಗಿನ ಚಿಂತೆ.ಚಕೋರ ಎಂಬ ಕಾಲ್ಪನಿಕ ಪಕ್ಷಿಯು ಕೇವಲ ಚಂದ್ರನ ಬೆಳಕನ್ನು ಕಿರಣಗಳನ್ನು ಕುಡಿದೇ ಜೀವಿಸುತ್ತದೆ ಎಂಬ ನಂಬಿಕೆಯಿದೆ. ಹಾಗಾಗಿ ಅದು ಸದಾ ಚಂದ್ರನ ಬೆಳಕಿಗಾಗಿ ಕಾತರಿಸುತ್ತಿರುತ್ತದೆ.

ಅಂಬುಜಕೆ ಭಾನುವಿನ ಉದಯದ ಚಿಂತೆ. ಅಂಬುಜ ಎಂದರೆ ತಾವರೆ ಹೂವು. ಸೂರ್ಯ ಉದಯಿಸಿದಾಗ ಮಾತ್ರ ತಾವರೆ ಅರಳುತ್ತದೆ. ಹಾಗಾಗಿ ತಾವರೆಗೆ ಸದಾ ಸೂರ್ಯನ ಉದಯದ ಮೇಲೆಯೇ ಗಮನವಿರುತ್ತದೆ.

ಭ್ರಮರಂಗೆ ಪರಿಮಳದ ಬಂಡುಂಬ ಚಿಂತೆ. ಭ್ರಮರ ಎಂದರೆ ದುಂಬಿ ಜೇನನೊಣ ದುಂಬಿಗೆ ಹೂವಿನ ಸುಗಂಧವನ್ನು ಆಸ್ವಾದಿಸುತ್ತಾ, ಅದರಲ್ಲಿರುವ ಮಕರಂದವನ್ನು ಜೇನನ್ನು ಹೀರುವುದರ ಕಡೆಯೇ ಚಿಂತೆ.
ಎನಗೆ ನಮ್ಮ ಕೂಡಲಸಂಗಮದೇವನ ನೆನೆವುದೇ ಚಿಂತೆ. ಮೇಲಿನ ಉದಾಹರಣೆಗಳಂತೆ, ಬಸವಣ್ಣನವರು "ನನ್ನ ಮನಸ್ಸು ಕೂಡ ಅಷ್ಟೇ ಸಹಜವಾಗಿ, ನಿರಂತರವಾಗಿ ನನ್ನ ಆರಾಧ್ಯ ದೈವವಾದ ಕೂಡಲಸಂಗಮದೇವನನ್ನು ಸ್ಮರಿಸುವುದರಲ್ಲೇ ಮುಳುಗಿರಲಿ" ಎಂದು ಆಶಿಸುತ್ತಾರೆ.

ಪ್ರಕೃತಿಯಲ್ಲಿ ಹೇಗೆ ಜೀವ ಜಗತ್ತು ತನಗೆ ಬೇಕಾದ ಮೂಲ ಸೆಲೆಯೊಂದಿಗೆ ನಿಕಟ ಸಂಪರ್ಕ ಹೊಂದಿದೆಯೋ, ಅದೇ ರೀತಿ ಒಬ್ಬ ಭಕ್ತನಿಗೆ ದೇವರ ಸ್ಮರಣೆ ಎಂಬುದು ಬಲವಂತದ್ದಾಗಿರದೆ, ಅತ್ಯಂತ ಸ್ವಾಭಾವಿಕ ಹಾಗೂ ನಿರಂತರ ಪ್ರಕ್ರಿಯೆಯಾಗಿರಬೇಕು ಎಂಬುದೇ ಈ ವಚನದ ಸಂದೇಶವಾಗಿದೆ. ಆದರೆ ವಚನಗಳು ನಮಗೆ ನೀಮಗೆ ದಾರಿದೀಪವಾಗಿವೆ. ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ ಅಂತರಗಂಗಿ–ಸಿಂಧನೂರು. 998094144

ಕಂಪ್ಲಿ ಸರ್ಕಾರಿ ಆಸ್ಪತ್ರೆಗೆ ಶಾಸಕ ಜೆ.ಎನ್. ಗಣೇಶ್ ದಿಢೀರ್ ಭೇಟಿ: ರಾತ್ರಿ ವೇಳೆ ವೈದ್ಯರಿಲ್ಲದ್ದಕ್ಕೆ ತೀವ್ರ ಆಕ್ರೋಶ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ಕ್ಷೇತ್ರದ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಕಂಪ್ಲಿ ಕ್ಷೇತ್ರದ ಶಾಸಕ ಜೆ.ಎನ್. ಗಣೇಶ್ ಅವರು ಶನಿವಾರ (ಅಕ್ಟೋಬರ್ 24) ರಾತ್ರಿ ಕಂಪ್ಲಿಯ ಪ್ರಾಥಮಿಕ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಶಾಸಕರ ಭೇಟಿಯ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ಕರ್ತವ್ಯದ ಮೇಲಿರಬೇಕಾದ ವೈದ್ಯರು ಗೈರುಹಾಜರಾಗಿರುವುದು ಕಂಡುಬಂದಿತು. ಈ ವೇಳೆ ಆಸ್ಪತ್ರೆಯಲ್ಲಿದ್ದ ರೋಗಿಗಳು ಶಾಸಕರ ಮುಂದೆ ಸೂಕ್ತ ಚಿಕಿತ್ಸೆ ಸಿಗುತ್ತಿಲ್ಲ ಎಂದು ತಮ್ಮ ಅಳಲನ್ನು ತೋಡಿಕೊಂಡರು. ಇದರಿಂದ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಶಾಸಕರು, "ರಾತ್ರಿ ವೇಳೆಯಲ್ಲಿ ಆಸ್ಪತ್ರೆಗೆ ಬರುವ ತುರ್ತು ರೋಗಿಗಳನ್ನು ವೈದ್ಯರಿಲ್ಲದೆ ಹೇಗೆ ನೋಡಿಕೊಳ್ಳುತ್ತೀರಿ?" ಎಂದು ಅಲ್ಲಿದ್ದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ಸ್ಥಳದಲ್ಲಿ ವೈದ್ಯರು ಇಲ್ಲದಿದ್ದಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಶಾಸಕರು, ತಕ್ಷಣವೇ ಜಿಲ್ಲಾ ವೈದ್ಯಾಧಿಕಾರಿಗಳೊಂದಿಗೆ (DHO) ದೂರವಾಣಿ ಮೂಲಕ ಮಾತುಕತೆ ನಡೆಸಿದರು. ಈ ವೇಳೆ ಜಿಲ್ಲಾ ವೈದ್ಯಾಧಿಕಾರಿಗಳು ಪ್ರತಿಕ್ರಿಯಿಸಿ, ಸಾರ್ವಜನಿಕರ ಸೇವೆಗೆ ಯಾವುದೇ ತೊಂದರೆಯಾಗದಂತೆ ಆಸ್ಪತ್ರೆಗೆ ತಕ್ಷಣವೇ ಪರ್ಯಾಯ ವೈದ್ಯರ ವ್ಯವಸ್ಥೆ ಕಲ್ಪಿಸುವುದಾಗಿ ಹಾಗೂ ಕರ್ತವ್ಯ ಲೋಪ ಎಸಗಿದ ವೈದ್ಯರ ವಿರುದ್ಧ ಕಟ್ಟುನಿಟ್ಟಿನ ಶಿಸ್ತು ಕ್ರಮ ಜರುಗಿಸುವುದಾಗಿ ಶಾಸಕರಿಗೆ ಭರವಸೆ ನೀಡಿದರು. ಶಾಸಕರ ಭೇಟಿಯ ಬೆನ್ನಲ್ಲೇ ತಡವಾಗಿ ಆಸ್ಪತ್ರೆಗೆ ಆಗಮಿಸಿದ ಕರ್ತವ್ಯ ನಿರತ ವೈದ್ಯರು, ಶಾಸಕರಲ್ಲಿ ತಮ್ಮ ತಪ್ಪಿಗೆ ಕ್ಷಮೆಯಾಚಿಸಿ ತಕ್ಷಣವೇ ರೋಗಿಗಳ ಉಪಚಾರಕ್ಕೆ ಹಾಜರಾದರು. ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷರಾದ ಹಬೀಬ್ ರೆಹಮಾನ್ ಹಾಗೂ ಪ್ರಮುಖ ಮುಖಂಡರಾದ ಬಿ. ಸಿದ್ದಪ್ಪ, ಕೆ.ಎಸ್. ಚಾಂದಭಾಷಾ, ಬಿ. ಜಾಫರ್, ಸಿ.ಆರ್. ಹನುಮಂತ, ಷಣ್ಮುಖಪ್ಪ, ಮೇಟ್ರಿ ಗಿರೀಶ, ಕುಮಾರ್, ವಾಸು ಸೇರಿದಂತೆ ಇತರರು ಶಾಸಕರಿಗೆ ಸಾಥ್ ನೀಡಿದರು.

ಜಾಲಹಳ್ಳಿ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಸೋಮವಾರ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು.



ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ (ಇಒ) ರಾಜೇಂದ್ರ ಕುಮಾರ್ ಅವರು, ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳು ಮತ್ತು ತತ್ವಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪಾಲಿಸಬೇಕು ಎಂದು ಹೇಳಿದರು. ಜಾಲಹಳ್ಳಿ ದೊಡ್ಡ ಪಟ್ಟಣವಾಗಿ ಬೆಳೆಯುತ್ತಿದ್ದು, ಪಟ್ಟಣದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದು. ಸಾರ್ವಜನಿಕರ ಅಗತ್ಯಗಳಿಗೆ ಅನುಗುಣವಾಗಿ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಹನುಮಂತಿ ಶಿವಬಸಪ್ಪ ರಾಮ ಪಾಳಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲಕ್ಷ್ಮೀ, ಉಪಾಧ್ಯಕ್ಷ ವಿರೇಶ್ ಅರಕೇರಾ, ಗ್ರಾಮ ಪಂಚಾಯಿತಿ ಸದಸ್ಯರಾದ ತಿಮ್ಮಣ್ಣ ನಾಯಕ್ ದಿವಾನ್, ಶಿವಮಾನ್ಯಪ್ಪ ತ್ಯಾಪ್ಲಿ, ಅಬ್ದುಲ್ ರಹಮಾನ್ ಖುರೇಶಿ, ರಮೇಶ್ ತೆಗ್ಗೆಳ್ಳಿ, ಗ್ರಾಮದ ಮುಖಂಡರಾದ ರಂಗಣ್ಣ ಕೊಲ್ಕರ್, ಭೀಮಣ್ಣ ಗುಮೇಧಾರ್, ನಿವೃತ್ತ ಶಿಕ್ಷಕ ಶಿವಪುತ್ರಪ್ಪ, ವೆಂಕೋಬ ತೋಟದ್, ಶ್ರೀನಿವಾಸ ತಿಂಪುರ್, ದುರುಗಪ್ಪ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

ಶಾಲೆ ಆರಂಭಕ್ಕೂ ಮುನ್ನವೇ ಕ್ರಿಕೆಟ್ ಪಂದ್ಯ ಮುಗಿಸಲು ಸಿದ್ಧ: ಎಚ್‌ಪಿಎಲ್ ಪಂದ್ಯಾವಳಿಗೆ ಅಡ್ಡಿಪಡಿಸದಂತೆ ಸ್ಥಳೀಯರ ಆಗ್ರಹ

ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಪಂದ್ಯಾವಳಿ ಮುಕ್ತಾಯಗೊಳಿಸುವ ಭರವಸೆ; ಆಯೋಜನೆಯಲ್ಲಿ ಭಾಗಿಯಾಗಿದ್ದವರೇ ಈಗ ವಿರೋಧಿಸುತ್ತಿದ್ದಾರೆ ಎಂಬ ಸ್ಥಳೀಯರ ಆರೋಪ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿರುವ ಮೈದಾನದಲ್ಲಿ ಸ್ಥಳೀಯರು ಪ್ರತಿವರ್ಷದ ಸಂಪ್ರದಾಯದಂತೆ ಎಚ್‌ಪಿ-ಎಲ್ (ಹೊರಟ್ಟಿ ಪ್ರೀಮಿಯರ್ ಲೀಗ್) ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸುತ್ತಾ ಬಂದಿದ್ದಾರೆ.



ಅದರಂತೆ ಈ ವರ್ಷವೂ ಯುವಕರಲ್ಲಿ ಕ್ರೀಡಾಸಕ್ತಿ ಬೆಳೆಸುವುದು, ದೈಹಿಕ ಕ್ಷಮತೆಯನ್ನು ಉತ್ತೇಜಿಸುವುದು ಹಾಗೂ ಸ್ಥಳೀಯ ಕ್ರೀಡಾ ಪ್ರತಿಭೆಗಳಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ. ಆದರೆ, ಪಂದ್ಯಾವಳಿಗೆ ಕೆಲವರು ಅಡ್ಡಿಪಡಿಸುತ್ತಿದ್ದಾರೆ ಎಂದು ಸ್ಥಳೀಯರು ಹಾಗೂ ಕ್ರೀಡಾಪಟುಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಶಾಲೆಗೆ ಭೇಟಿ ನೀಡಿದ ಇಸಿಒ ನರೇಶ್ ಅವರಿಗೆ ಸ್ಥಳೀಯರು ಹಾಗೂ ಕ್ರೀಡಾಪಟುಗಳು ಮನವಿ ಸಲ್ಲಿಸಿ, ಪಂದ್ಯಾವಳಿಯನ್ನು ಮುಂದುವರಿಸಲು ಅವಕಾಶ ಕಲ್ಪಿಸುವಂತೆ ಆಗ್ರಹಿಸಿದರು. ಶಾಲೆಯ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ಬೆಳಿಗ್ಗೆ ಶಾಲೆ ಆರಂಭವಾಗುವ ಮೊದಲೇ ಕ್ರಿಕೆಟ್ ಪಂದ್ಯಗಳನ್ನು ಮುಕ್ತಾಯಗೊಳಿಸುವುದಾಗಿ ಭರವಸೆ ನೀಡಿದರು. ಹೀಗಾಗಿ ಪಂದ್ಯಾವಳಿಗೆ ಅಡ್ಡಿಪಡಿಸದೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಟೂರ್ನಿ ಆಯೋಜನೆಯಲ್ಲಿ ಭಾಗಿಯಾಗಿದ್ದವರಿಂದಲೇ ವಿರೋಧ: ಸ್ಥಳೀಯರ ಆರೋಪ

ಶಾಲಾ ಮೈದಾನದಲ್ಲಿ ಖಾಸಗಿ ವ್ಯಕ್ತಿಗಳು ಕ್ರಿಕೆಟ್ ಪಂದ್ಯಾವಳಿ ನಡೆಸುತ್ತಿದ್ದಾರೆ ಎಂದು ದೂರು ನೀಡಿರುವ ಬಾಲರಾಜ ಮತ್ತು ಉದಯಕುಮಾರ ಅವರೇ ಈ ಹಿಂದೆ ಎಚ್‌ಪಿ-ಎಲ್ ಟೂರ್ನಿ ಆಯೋಜನೆಗಾಗಿ ಸಭೆ ಕರೆದಿದ್ದರು ಎಂದು ಸ್ಥಳೀಯರು ಆರೋಪಿಸಿದ್ದಾರೆ. ಸಭೆಯ ದಿನಾಂಕ ಮತ್ತು ಸಮಯವನ್ನು ನಿಗದಿಪಡಿಸಿ ವಾಟ್ಸ್‌ಆ?ಯಪ್ ಗ್ರೂಪ್‌ನಲ್ಲಿ ಸಂದೇಶ ಹಂಚಿಕೊಂಡು ಸಭೆ ನಡೆಸಲಾಗಿತ್ತು. ಅಲ್ಲದೆ, ಟೂರ್ನಿಯ ಬಹುಮಾನಗಳ ವಿವರಗಳನ್ನು ಒಪ್ಪಿಕೊಂಡು ಗ್ರೂಪ್‌ನಲ್ಲಿ ಪ್ರಕಟಿಸಲಾಗಿತ್ತು. ಆಟಗಾರರ ಅರ್ಜಿಗಳನ್ನು ಸ್ವೀಕರಿಸುವ ಪ್ರಕ್ರಿಯೆಯಲ್ಲಿಯೂ ಅವರು ಭಾಗಿಯಾಗಿದ್ದರು ಎಂದು ಸ್ಥಳೀಯರು ತಿಳಿಸಿದ್ದಾರೆ.

ಆದರೆ, ಇದೀಗ ಆಟಗಾರರು ತಮ್ಮ ನಿರೀಕ್ಷೆಯಂತೆ ನಡೆದುಕೊಳ್ಳುತ್ತಿಲ್ಲ ಎಂಬ ಕಾರಣಕ್ಕೆ ಟೂರ್ನಿಯನ್ನು ನಿಲ್ಲಿಸಲು ಅಧಿಕಾರಿಗಳ ಮೂಲಕ ಪ್ರಯತ್ನಿಸಲಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಈ ಕುರಿತು ಸಂಬಂಧಪಟ್ಟವರ ಸ್ಪಷ್ಟನೆ ಲಭ್ಯವಾದಲ್ಲಿ ವರದಿಯಲ್ಲಿ ಪ್ರಕಟಿಸಲಾಗುವುದು.

ಶೈಕ್ಷಣಿಕ ಚಟುವಟಿಕೆಗಳಿಗೆ ಅಡ್ಡಿಯಾಗದಂತೆ ಅವಕಾಶ ಕಲ್ಪಿಸಲು ಆಗ್ರಹ

ಶಾಲೆಯ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ಅಡಚಣೆಯಾಗದಂತೆ ಕ್ರಿಕೆಟ್ ಪಂದ್ಯಾವಳಿ ನಡೆಸಲು ಅವಕಾಶ ನೀಡಬೇಕು. ಸ್ಥಳೀಯ ಯುವಕರ ಕ್ರೀಡಾಸಕ್ತಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕ್ರೀಡಾಪಟುಗಳು ಹಾಗೂ ಸ್ಥಳೀಯರು ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ದುರುಗಪ್ಪ ಹೊರಟ್ಟಿ, ಬಡವರ ನಾಯಕ ಲಿಂಗದಹಳ್ಳಿ, ಮೌನೇಶ್ ದಾಸರ, ಹನುಮಂತ ಮಡಿವಾಳ, ಅಮ್ಮಣ್ಣ, ರಂಗನಾಥ ವಂದಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವರದಿ ಖಾಜಾ ಹುಸೇನ್ ಬಾಬಾ ಜಾಲಹಳ್ಳಿ

ಜಾಲಹಳ್ಳಿ ಸರ್ಕಾರಿ ಶಾಲಾ ಮೈದಾನದಲ್ಲಿ ಖಾಸಗಿ ಕ್ರಿಕೆಟ್ ಟೂರ್ನಿ: ಶಿಕ್ಷಣಾಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಆಕ್ರೋಶ

ಶಾಲಾ ಮೈದಾನವನ್ನು ಖಾಸಗಿ ಪಂದ್ಯಾವಳಿಗೆ ನೀಡಿದ ಮುಖ್ಯೋಪಾಧ್ಯಾಯರ ವಿರುದ್ಧ ಕ್ರಮಕ್ಕೆ ಉದಯಕುಮಾರ್ ಆಗ್ರಹ



❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಕನ್ಯಾ ಪ್ರೌಢಶಾಲೆಯ ಮೈದಾನದಲ್ಲಿ ಖಾಸಗಿ ಕ್ರಿಕೆಟ್ ಟೂರ್ನಮೆಂಟ್ ನಡೆಸಲು ಅವಕಾಶ ನೀಡಿರುವುದಕ್ಕೆ ಆಕ್ಷೇಪ ವ್ಯಕ್ತವಾಗಿದ್ದು, ಈ ಪ್ರಕರಣದಲ್ಲಿ ಕರ್ತವ್ಯಲೋಪ ಎಸಗಿರುವ ಮುಖ್ಯೋಪಾಧ್ಯಾಯರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಉದಯಕುಮಾರ್ ಒತ್ತಾಯಿಸಿದ್ದಾರೆ.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲೆಯ ಆಸ್ತಿಯನ್ನು ಸಂರಕ್ಷಿಸಬೇಕಾದ ಮುಖ್ಯೋಪಾಧ್ಯಾಯರೇ ನಿಯಮಗಳನ್ನು ಉಲ್ಲಂಘಿಸಿ, ಖಾಸಗಿ ವ್ಯಕ್ತಿಗಳೊಂದಿಗೆ ಶಾಮೀಲಾಗಿ ಶಾಲಾ ಮೈದಾನದಲ್ಲಿ ಕ್ರಿಕೆಟ್ ಪಂದ್ಯಾವಳಿ ನಡೆಸಲು ಅವಕಾಶ ಕಲ್ಪಿಸಿದ್ದಾರೆ ಎಂದು ಆರೋಪಿಸಿದರು.

ಈ ಕುರಿತು 2026ರ ಅಕ್ಟೋಬರ್ 9ರಂದು ರಾಯಚೂರು ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ (DDPI) ದೂರು ಸಲ್ಲಿಸಿದ್ದರೂ ಈವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದೂರಿದರು. ಶಾಲಾ ಮೈದಾನದಲ್ಲಿ ಅನಧಿಕೃತ ಚಟುವಟಿಕೆಗಳಿಗೆ ಅವಕಾಶ ನೀಡುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ವಾತಾವರಣ ಹಾಗೂ ಸುರಕ್ಷತೆಗೆ ಧಕ್ಕೆಯಾಗುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ವಿಚಾರವಾಗಿ ಸಂಬಂಧಿಸಿದ ಶಿಕ್ಷಣಾಧಿಕಾರಿಗಳನ್ನು ಭೇಟಿ ಮಾಡಿ, ಶಾಲಾ ಆವರಣದಲ್ಲಿ ನಡೆಯುತ್ತಿರುವ ಚಟುವಟಿಕೆಗಳ ಕುರಿತು ಮಾಹಿತಿ ನೀಡಲಾಗಿದೆ. ಶಾಲೆಯ ಆಸ್ತಿಯನ್ನು ರಕ್ಷಿಸುವ ಜವಾಬ್ದಾರಿ ಹೊಂದಿರುವ ಅಧಿಕಾರಿಗಳು ಹಾಗೂ ಮುಖ್ಯೋಪಾಧ್ಯಾಯರು ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಿಂದೆ ಟೂರ್ನಮೆಂಟ್ ನಡೆಸಿದ್ದರೂ ಈ ಬಾರಿ ವಿರೋಧ

ಈ ಹಿಂದೆ ಉದಯಕುಮಾರ್ ಅವರೇ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಿದ್ದರು ಎಂಬ ಆರೋಪದ ಕುರಿತು ಪ್ರತಿಕ್ರಿಯಿಸಿದ ಅವರು, "ಹಿಂದೆ ನಾನು ಕ್ರಿಕೆಟ್ ಟೂರ್ನಮೆಂಟ್ ನಡೆಸಿದ್ದು ನಿಜ. ಆದರೆ, ಶಾಲೆಗೆ ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದರಿಂದ ಈ ಬಾರಿ ಪಂದ್ಯಾವಳಿ ನಡೆಸಬಾರದು ಎಂದು ಹೇಳಿದ್ದೇನೆ. ಇಂತಹ ಪರಿಸ್ಥಿತಿಯಲ್ಲೂ ಶಾಲಾ ಮೈದಾನದಲ್ಲಿ ಕ್ರಿಕೆಟ್ ಪಂದ್ಯಾವಳಿ ನಡೆಸುತ್ತಿರುವುದು ಖಂಡನೀಯ" ಎಂದು ತಿಳಿಸಿದರು.

ಶಾಲಾ ಮೈದಾನದಲ್ಲಿ ಅನಧಿಕೃತವಾಗಿ ಕ್ರಿಕೆಟ್ ಪಂದ್ಯಾವಳಿ ನಡೆಸಲು ಅವಕಾಶ ನೀಡಿದ ಮುಖ್ಯೋಪಾಧ್ಯಾಯರನ್ನು ಅಮಾನತುಗೊಳಿಸಿ, ಪ್ರಕರಣದ ಕುರಿತು ಸೂಕ್ತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳದಿದ್ದರೆ ಶಿಕ್ಷಣಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಗೋವಿಂದ, ಶರಣಬಸವ ಕಾವಲಿ, ಶಿವರಾಜ ಬಾವಿಮನಿ, ವೆಂಕಟೇಶ ದೊರೆ, ರಂಗಪ್ಪ, ಶಿವು ಬಂಡಿ, ತಿಮ್ಮಣ್ಣ, ಸಾಬಣ್ಣ, ಕೃಷ್ಣಪ್ಪ, ರವಿ, ನಿಂಗಪ್ಪ ಹಾಗೂ ವೆಂಕೋಬ ಉಪಸ್ಥಿತರಿದ್ದರು.

ಮೈಸೂರಿನಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಭವ್ಯ ಮೆರವಣಿಗೆಗೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ನಗರಾಭಿವೃದ್ಧಿ ಸಚಿವ ಡಾ. ಎಸ್ ಯತೀಂದ್ರ ಸಿದ್ದರಾಮಯ್ಯ. ಚಾಲನೆ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ: ಸಾಂಸ್ಕೃತಿಕ ನಗರ ಮೈಸೂರಿನಲ್ಲಿ ಪ್ರಸಿದ್ಧ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯ ಅಂಗವಾಗಿ ಭವ್ಯ ಮೆರವಣಿಗೆಗೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ನಗರಾಭಿವೃದ್ಧಿ ಸಚಿವರಾದ ಡಾ ಎಸ್. ಯತೀಂದ್ರ ಸಿದ್ದರಾಮಯ್ಯ ಅವರು ಚಾಲನೆ ನೀಡಿ, ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.



ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಸಚಿವರು ಮಹರ್ಷಿ ವಾಲ್ಮೀಕಿ ಜಯಂತಿಯ ಅಂಗವಾಗಿ ನಾಡಿನ ಜನತೆಗೆ ಶುಭಾಶಯ ಕೋರುವ ಮೂಲಕ ಮಹರ್ಷಿ ವಾಲ್ಮೀಕಿ ಅವರ ವಿಚಾರಧಾರೆಗಳನ್ನು ವಿವರಿಸಿದರು ಜ್ಞಾನ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳ ಪ್ರತೀಕವಾದ ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳು ಮತ್ತು ಜೀವನ ಸಂದೇಶಗಳು ಇಡೀ ಸಮಾಜಕ್ಕೆ ಸದಾ ದಾರಿ ದೀಪ ಹಾಗೂ ಪ್ರೇರಣೆಯಾಗಿವೆ. ರಾಮಾಯಣ ಮಹಾಕಾವ್ಯದ ಮೂಲಕ ಜಗತ್ತಿಗೆ ಶಾಂತಿ, ಸಮಾನತೆ ಮತ್ತು ನೈತಿಕ ಮೌಲ್ಯಗಳನ್ನು ಸಾರಿದ ವಾಲ್ಮೀಕಿ ಅವರ ತತ್ವಗಳು ಪ್ರತಿಯೊಬ್ಬರಿಗೂ ದಾರಿದೀಪವಾಗಿದ್ದು, ಸಮಾಜದಲ್ಲಿ ಶೋಷಿತ ಮತ್ತು ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ವಾಲ್ಮೀಕಿಯವರ ಆಶಯಗಳು ಮುಖ್ಯ ಶಕ್ತಿಯಾಗಿವೆ. ಎಂದು ಹೇಳಿದರು

ಈ ಕಾರ್ಯಕ್ರಮದಲ್ಲಿ ಶಾಸಕರಾದ ಜಿ.ಟಿ. ದೇವೇಗೌಡ, ಶ್ರೀವತ್ಸ, ವಿಧಾನ ಪರಿಷತ್ ಸದಸ್ಯರಾದ ಸಿ.ಎನ್. ಮಂಜೇಗೌಡ, ಮೈಸೂರು ಜಿಲ್ಲಾಧಿಕಾರಿಗಳಾದ ಜಿ. ಲಕ್ಷ್ಮಿಕಾಂತ ರೆಡ್ಡಿ ಮೈಸೂರು ಮೂಡ ಮಾಜಿ ಅಧ್ಯಕ್ಷ ರಾಜೀವ್ ಸೇರಿದಂತೆ ವಾಲ್ಮೀಕಿ ಸಮಾಜದ ಹಿರಿಯ ಮುಖಂಡರು, ವಿವಿಧ ಜನಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಅಪಾರ ಸಂಖ್ಯೆಯ ಸಾರ್ವಜನಿಕರು ಮುಖಂಡರುಗಳು ಮೆರವಣಿಗೆಯಲ್ಲಿ ಭಾಗಿಯಾಗಿದ್ದರು

ಫೆಡರಲ್ ಪಬ್ಲಿಕ್ ಶಾಲೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ಯರಮರಸ ಕ್ಯಾಂಪ್‌ನಲ್ಲಿರುವ ಫೆಡರಲ್ ಪಬ್ಲಿಕ್ ಸಿಬಿಎಸ್‌ಇ (CBSE) ಶಾಲೆಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮೊಹಮ್ಮದ್ ಅಬ್ದುಲ್ ಹೈ ಪೀರೋಜ್ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕಿ ಕು. ಶ್ರೀಲೇಖಾ ಅವರು ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷರಾದ ಮೊಹಮ್ಮದ್ ಅಬ್ದುಲ್ ಹೈ ಪೀರೋಜ್ ಅವರು, ಭಾರತದ ಮಹಾನ್ ಗ್ರಂಥಗಳಲ್ಲಿ ಒಂದಾದ ರಾಮಾಯಣ ಮಹಾಕಾವ್ಯವನ್ನು ರಚಿಸಿದ ಮಹರ್ಷಿ ವಾಲ್ಮೀಕಿಯವರು ಆದಿಕವಿಯಾಗಿ ಪ್ರಸಿದ್ಧರಾಗಿದ್ದಾರೆ. ಭಾರತೀಯ ಸಾಹಿತ್ಯ ಮತ್ತು ಸಂಸ್ಕೃತಿಗೆ ಅವರು ನೀಡಿದ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು.

ನಂತರ ಕಾರ್ಯನಿರ್ವಾಹಕ ನಿರ್ದೇಶಕಿ ಕು. ಶ್ರೀಲೇಖಾ ಅವರು ಮಕ್ಕಳಿಗೆ ಮಹರ್ಷಿ ವಾಲ್ಮೀಕಿಯವರ ಜೀವನ ಚರಿತ್ರೆಯನ್ನು ಪರಿಚಯಿಸಿದರು. ಅವರ ಬಾಲ್ಯದ ಹೆಸರು ರತ್ನಾಕರವಾಗಿದ್ದು, ನಂತರ ಮಹರ್ಷಿಯಾಗಿ ಪ್ರಸಿದ್ಧರಾದರು. ಸಂಸ್ಕೃತದಲ್ಲಿ ಸುಮಾರು 24,000 ಶ್ಲೋಕಗಳನ್ನು ಒಳಗೊಂಡ ರಾಮಾಯಣ ಮಹಾಕಾವ್ಯವನ್ನು ರಚಿಸಿದ ಕಾರಣ ಅವರನ್ನು ಆದಿಕವಿ ಎಂದು ಕರೆಯಲಾಗುತ್ತದೆ ಎಂದು ವಿವರಿಸಿದರು.

ಅಲ್ಲದೆ, ವನವಾಸದಲ್ಲಿದ್ದ ಸೀತಾದೇವಿಗೆ ತಮ್ಮ ಆಶ್ರಮದಲ್ಲಿ ಆಶ್ರಯ ನೀಡಿದ ಮಹರ್ಷಿ ವಾಲ್ಮೀಕಿಯವರು, ಅಲ್ಲಿ ಜನಿಸಿದ ಲವ–ಕುಶರಿಗೆ ರಾಮಾಯಣದ ಜ್ಞಾನವನ್ನು ಬೋಧಿಸಿದರು. ಅವರ ಜೀವನವು ಜ್ಞಾನ, ಸತ್ಯ, ಧರ್ಮ ಹಾಗೂ ಮಾನವೀಯ ಮೌಲ್ಯಗಳ ಮಹತ್ವವನ್ನು ಸಾರುತ್ತದೆ ಎಂದು ಮಕ್ಕಳಿಗೆ ತಿಳಿಸಿದರು.



ಕಾರ್ಯಕ್ರಮದಲ್ಲಿ ಕಚೇರಿಯ ಮುಖ್ಯ ಅಧೀಕ್ಷಕರಾದ ಶ್ರೀ ಗಧಾರ ವೆಂಕಟೇಶ ಸೇರಿದಂತೆ ಶಾಲೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101